RNI: KARKAN\2019\78042



ಸಂಪಾದಕರು : ಸಿ.ಎನ್.ಸಮಗಂಡಿ.

# ಸತ್ಯಮಿಥ್ಯ

ನಿಮ್ಮ ಪ್ರತಿಬಿಂಬ ಕನ್ನಡ ದಿನ ಪತ್ರಿಕೆ

Satyamithi Kannada Daily Morning

ಚನ್ನು ಮೆನ್ಸ್‌ವೇರ್
ಕೊಳ್ಳಿಯವರ ಕ್ರಾಸ್.
ಚನ್ನು ಸ್ಟಿಚ್‌ವರ್ಲ್ಡ್
ಬಿ.ಎಸ್.ಎನ್.ಎಲ್. ಆಫೀಸ್ ಹತ್ತಿರ,
ಜೇಂಟ್ಸ್ ಸ್ಪೇಷಲಿಸ್ಟ ಟೇಲರ್
ಗಜೇಂದ್ರಗಡ-582114.
ಸೆಲ್ : 9986982482, 9686165708

ಸಾಲ ತೀರಿಸಿ ದಾಖಲೆ ಮರಳಿ ಪಡೆಯಿರಿ! 2
ಕೊಪ್ಪಳ ಜಿಲ್ಲೆಯಲ್ಲಿ ಬರ ಅಧ್ಯಯನ ತಂಡದಿಂದ ಬೆಳೆ ಹಾನಿ ಪರಿಶೀಲನೆ 3
ಕಣ್ಣಿಗೆ ಕಾಣುವುದೆಲ್ಲವನ್ನೂ ನಂಬಬೇಡಿ 4

ಸಂಪುಟ(Volume): 1 ಸಂಚಿಕೆ (Issue): 85 ● ಪುಟ (Page): 4 ● ದರ: Rs. 4 ಬುಧವಾರ 7 ಅಕ್ಟೋಬರ್ 2026 ● 7 OCTOBER 2026 ● ಧಾರವಾಡ ● ಹಾವೇರಿ ● ಗದಗ ● ಕೊಪ್ಪಳ ● ವಿಜಯನಗರ ● ರಾಯಚೂರು ● ವಿಜಯಪುರ ● ಬಾಗಲಕೋಟೆ

## ಮರಗಳ ಮಾರಣಹೋಮ!

### । ವಿಂಡ್ ಪವರ್ ಕಂಪನಿಗಳ ಅಟ್ಟಹಾಸ । ಪರವಾನಗಿ ಇಲ್ಲದೆ 12 ಮರ ಕಡಿತ
### । ಎಸ್.ಕೆ.ಬಿ.ಪಿ.ಎಲ್. ವಿರುದ್ಧ ಪ್ರಕರಣ ದಾಖಲಿಸಿದ ಅರಣ್ಯ ಇಲಾಖೆ ಅಧಿಕಾರಿಗಳು

**ಸತ್ಯಮಿಥ್ಯ ಗಜೇಂದ್ರಗಡ:** ತಾಲೂಕಿನ ಸೂಡಿ–ಕಳಕಾಪೂರ ರಸ್ತೆಯ ಬದಿಯಲ್ಲಿ ಬೆಳೆದಿದ್ದ ಬೃಹತ್‌ಗಾತ್ರದ ಮರಗಳನ್ನು ಪವನ ವಿದ್ಯುತ್ (ವಿಂಡ್ ಪವರ್) ಕಂಪನಿಯೊಂದರಿಂದ ಯಾವುದೇ ಪರವಾನಗಿ ಪಡೆಯದೆ ಕಡಿದಿರುವ ಆರೋಪ ಕೇಳಿಬಂದಿದ್ದು, ಪರಿಸರ ಸಂಘಟನೆಗಳು ಹಾಗೂ ಸ್ಥಳೀಯರಲ್ಲಿ ತೀವ್ರ ಆಕ್ರೋಶ ವ್ಯಕ್ತವಾಗಿದೆ.

ಎಸ್.ಕೆ.ಬಿ.ಪಿ.ಎಲ್. ವಿಂಡ್ ಪವರ್ ಕಂಪನಿಯವರು ರಸ್ತೆ ಬದಿಯಲ್ಲಿದ್ದ 12 ಬೃಹತ್ ಮರಗಳನ್ನು ಕಡಿದು ಹಾಕಿದ್ದಾರೆ. ಹಲವು ವರ್ಷಗಳಿಂದ ಅರಣ್ಯ ಇಲಾಖೆ, ಗ್ರಾಮಸ್ಥರು ಹಾಗೂ ರೈತರ ಸಹಕಾರದಿಂದ ಬೆಳೆಸಿ ಸಂರಕ್ಷಿಸಿಕೊಂಡು ಬಂದಿದ್ದ ಮರಗಳನ್ನು ಕಾಮಗಾರಿಯ ನೆಪದಲ್ಲಿ ಕಡಿದಿರುವುದು ಖಂಡನೀಯ ಎಂದು 'ಗ್ರೀನ್ ಆರ್ಮಿ' ಸಂಘಟನೆ ಆರೋಪಿಸಿದೆ.

ಮರಗಳ ಕಡಿತಕ್ಕೆ ಮುನ್ನ ಅರಣ್ಯ ಇಲಾಖೆಯಿಂದ ಅಗತ್ಯ ಪರವಾನಗಿ ಪಡೆಯಲಾಗಿದೆಯೇ ಎಂಬುದರ ಕುರಿತು ಪರಿಶೀಲನೆ ನಡೆಸಬೇಕು ಎಂದು ಸಂಘಟನೆ ಒತ್ತಾಯಿಸಿತ್ತು. ಈ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆ ಪ್ರಕರಣ ದಾಖಲಿಸಿಕೊಂಡಿದ್ದು, ಕಾನೂನು ಕ್ರಮಕ್ಕೆ ಮುಂದಾಗಿದೆ.

ಮರಗಳನ್ನು ಕಡಿದು ಕೇವಲ ದಂಡ ವಿಧಿಸುವುದರಿಂದ ಕಳೆದುಹೋದ ಹಸಿರು ಸಂಪತ್ತನ್ನು ಮರಳಿ ಪಡೆಯಲು ಸಾಧ್ಯವಿಲ್ಲ. ಹಲವು ವರ್ಷಗಳ ಪರಿಶ್ರಮದಿಂದ ಬೆಳೆಸಿದ ಮರಗಳು ಪರಿಸರ ಸಮತೋಲನ, ಮಣ್ಣಿನ ಸಂರಕ್ಷಣೆ ಹಾಗೂ ಜನರಿಗೆ ನೆರಳು ನೀಡುವಲ್ಲಿ ಪ್ರಮುಖ ಪಾತ್ರವಹಿಸುತ್ತವೆ. ಬರದ ಪರಿಸ್ಥಿತಿ ಎದುರಿಸುತ್ತಿರುವ ಪ್ರದೇಶದಲ್ಲಿ ಮರಗಳ ಕಡಿತ ಮುಂದುವರಿದರೆ ಪರಿಸರದ ಮೇಲೆ ಗಂಭೀರ ಪರಿಣಾಮ ಬೀರುವ ಸಾಧ್ಯತೆಯಿದೆ ಎಂದು ಕನ್ನಡ ಪರ ಸಂಘಟನೆ ಮತ್ತು ದಲಿತ ಪರ ಸಂಘಟನೆ ಮುಖಂಡರು ಆತಂಕ ವ್ಯಕ್ತಪಡಿಸಿದರು.

ಕಡಿದ ಪ್ರತಿಯೊಂದು ಮರಕ್ಕೆ ಪ್ರತಿಯಾಗಿ ಹೆಚ್ಚಿನ ಪ್ರಮಾಣದಲ್ಲಿ ಸಸಿಗಳನ್ನು ಕಂಪನಿಯ ವೆಚ್ಚದಲ್ಲೇ ನೆಡಿಸಿ, ಅವು ಮರಗಳಾಗಿ ಬೆಳೆಯುವವರೆಗೆ ಸಂರಕ್ಷಣೆ ಹಾಗೂ ಪೋಷಣೆಯ ಜವಾಬ್ದಾರಿಯನ್ನೂ ಕಂಪನಿಯೇ ವಹಿಸಬೇಕು ಎಂದು ಸಂಘಟನೆ ಮುಖಂಡರು ಆಗ್ರಹಿಸಿದ್ದಾರೆ .

ಮರಗಳ ಸಂರಕ್ಷಣೆ ಅರಣ್ಯ ಇಲಾಖೆಯೊಂದರ ಜವಾಬ್ದಾರಿಯಲ್ಲ. ಜನಪ್ರತಿನಿಧಿಗಳು, ಅಧಿಕಾರಿಗಳು, ರೈತರು, ಸಂಘ–ಸಂಸ್ಥೆಗಳು ಹಾಗೂ ಪರಿಸರ ಪ್ರೇಮಿಗಳು ಪಕ್ಷಾತೀತವಾಗಿ ಪರಿಸರ ರಕ್ಷಣೆಗೆ ಮುಂದಾಗಬೇಕು. ಇಲ್ಲವಾದಲ್ಲಿ ಮುಂದಿನ ಪೀಳಿಗೆಗೆ ಹಸಿರು ಪರಿಸರದ ಬದಲಿಗೆ ಬರಡು ಭೂಮಿಯನ್ನು ಬಿಟ್ಟುಕೊಡುವ ಪರಿಸ್ಥಿತಿ ನಿರ್ಮಾಣವಾಗಲಿದೆ ಎಂದು 'ಗ್ರೀನ್ ಆರ್ಮಿ' ಎಚ್ಚರಿಸಿದೆ.







"ಸೂಡಿ–ಕಳಕಾಪೂರ ರಸ್ತೆಯ ಬದಿಯಲ್ಲಿ ಎಸ್.ಕೆ.ಬಿ.ಪಿ.ಎಲ್. ವಿಂಡ್ ಪವರ್ ಕಂಪನಿಯವರು ಯಾವುದೇ ಪರವಾನಗಿ ಪಡೆಯದೆ 12 ಮರಗಳನ್ನು ಕಡಿದಿರುವುದು ಕಂಡುಬಂದಿದೆ. ಈ ಕುರಿತು ಪ್ರಕರಣ ದಾಖಲಿಸಲಾಗಿದ್ದು, ಪ್ರಕರಣ ಸಂಖ್ಯೆ 08/2026 ಆಗಿದೆ. ಪ್ರಕರಣವನ್ನು ನ್ಯಾಯಾಲಯದ ಪರಿಶೀಲನೆಗೆ ಸಲ್ಲಿಸಲಾಗಿದೆ. ಸದ್ಯ ತನಿಖೆ ನ್ಯಾಯಾಲಯದ ಹಂತದಲ್ಲಿದೆ.

ವೀರೇಂದ್ರ ಮರಿಬಸಣ್ಣನವರ, ವಲಯ ಅರಣ್ಯಾಧಿಕಾರಿ

ಈ ಸಂದರ್ಭದಲ್ಲಿ ಕರ್ನಾಟಕ ಅಭಿವೃದ್ಧಿ ವೇದಿಕೆ ರಾಜ್ಯಾಧ್ಯಕ್ಷ ವಿನಾಯಕ ಜರತಾರಿ, ಜಯಕರ್ನಾಟಕ ಜನಪರ ವೇದಿಕೆ ತಾಲೂಕಾಧ್ಯಕ್ಷ ಕಳಕಪ್ಪ ಪೋತಾ,ನಮ್ಮ ಕರ್ನಾಟಕ ಸೇನೆಯ ತಾಲೂಕಾಧ್ಯಕ್ಷ ಯಮನೂರಪ್ಪ ತೀರಕೋಜಿ,ಕರವೇ ತಾಲೂಕಾಧ್ಯಕ್ಷ(ಪ್ರವೀಣ ಶೆಟ್ಟಿ ಬಣ )ಬಸವರಾಜ ಹೂಗಾರ,ದಲಿತ ಮುಖಂಡ ಮಾರುತಿ ಹಾದಿಮನಿ,ವಿರೂಪಾಕ್ಷ ಅಳವಂಡಿ, ಲಕ್ಷ್ಮಣ ಬಂಕದ,ಪ್ರಕಾಶ ರಾಠೋಡ್ , ಪರಶುರಾಮ ಬಡಿಗೇರ ಸೇರಿದಂತೆ ಅನೇಕ ಸಂಘಟನೆ ಮುಖಂಡರು ಉಪಸ್ಥಿತರಿದ್ದರು.



## ಗ್ಯಾರಂಟಿಗಳಿಗಾಗಿ ಅಬಕಾರಿ ಮೇಲೆ ನಿರೀಕ್ಷೆ ಹೆಚ್ಚಳ: ಬಿ.ವೈ. ವಿಜಯೇಂದ್ರ ವಾಗ್ದಾಳಿ

**ಸತ್ಯಮಿಥ್ಯ ಸುದ್ದಿಮೂಲ ಧಾರವಾಡ:** ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳಿಂದಾಗಿ ಹಣಕಾಸು ಪರಿಸ್ಥಿತಿ ಬಿಗಡಾಯಿಸಿದ್ದು, ಯೋಜನೆಗಳಿಗೆ ಹಣ ಕ್ರೋಢೀಕರಿಸಲು ಸರ್ಕಾರ ಅಬಕಾರಿ ಇಲಾಖೆಗೆ ಆದಾಯ ಸಂಗ್ರಹದ ಗುರಿಯನ್ನು ಹೆಚ್ಚಳ ಮಾಡಿದೆ ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ.

ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಅಬಕಾರಿ ಇಲಾಖೆಯ ಆದಾಯವು 11,598 ಕೋಟಿ ರೂ ಹೆಚ್ಚಾಗಿದೆ. ಈ ಮೂಲಕ ರಾಜ್ಯ ಸರ್ಕಾರವು ಕರ್ನಾಟಕವನ್ನು ಮದ್ಯಪಾನಿಗಳ ರಾಜ್ಯವನ್ನಾಗಿ ಮಾಡುತ್ತಿದೆ ಎಂದು ಟೀಕಿಸಿದರು.

**ಸಾರಿಗೆನಿಗಮಗಳಿಗೆನಷ್ಟದಬಿಸಿ:** ರಾಜ್ಯಸರ್ಕಾರದಿಂದ ಕೆಎಸ್‌ಆರ್‌ಟಿಸಿಗೆ 6.5 ಸಾವಿರ ಕೋಟಿ ಬಾಕಿ ಉಳಿದಿದ್ದು, ನೌಕರರಿಗೆ ಸಂಬಳ ಪಾವತಿಸುವುದು ಕಷ್ಟವಾಗಿದೆ ಎಂದು ನಿಗಮದ ವ್ಯವಸ್ಥಾಪಕ ನಿರ್ದೇಶಕರು ಹಣಕಾಸು ಇಲಾಖೆ ಕಾರ್ಯದರ್ಶಿಗೆ ಪತ್ರ ಬರೆದಿದ್ದಾರೆ. ಪ್ರಸ್ತುತ ನಾಲ್ಕೂ ಸಾರಿಗೆ ನಿಗಮಗಳಿಗೆ ಒಟ್ಟು ಸುಮಾರು 8 ಸಾವಿರ ಕೋಟಿ ರೂ ನಷ್ಟವಾಗಿದೆ ಎಂದು ಅವರು ತಿಳಿಸಿದರು.

ಕೃಷಿ ಸಾಲ ಮನ್ನಾಗೆ ಒತ್ತಾಯ:

ಮಹಾರಾಷ್ಟ್ರ ಸರ್ಕಾರದ ಮಾದರಿಯಲ್ಲಿ ಕರ್ನಾಟಕದಲ್ಲೂ 5 ಲಕ್ಷದವರೆಗೆ ಕೃಷಿ ಸಾಲ ಮನ್ನಾ ಮಾಡಬೇಕು ಹಾಗೂ ಹೆಕ್ಟೇರ್‌ಗೆ 50 ಸಾವಿರ ರೂ ಬರ ಪರಿಹಾರ ನೀಡಬೇಕು ಎಂದು ಇದೇ ವೇಳೆ ಅವರು ಆಗ್ರಹಿಸಿದರು.

ಎಸ್‌ಐಆರ್ ಕುರಿತು

**ಕಾಂಗ್ರೆಸ್ ಅಪಪ್ರಚಾರ:** ಎಸ್‌ಐಆರ್ ಕುರಿತು ಕಾಂಗ್ರೆಸ್ ಅಪಪ್ರಚಾರ ಮಾಡುತ್ತಿದ್ದು, ತನ್ನ ವೈಫಲ್ಯಗಳನ್ನು ಮುಚ್ಚಿಹಾಕಿಕೊಳ್ಳಲು ಚುನಾವಣಾ ಆಯೋಗದ ಮೇಲೆ ಗೂಬೆ ಕೂರಿಸುತ್ತಿದೆ ಎಂದು ವಿಜಯೇಂದ್ರ ದೂರಿದರು. ಪ್ರತಿ ಕ್ಷೇತ್ರದಲ್ಲೂ 5 ರಿಂದ 10 ಸಾವಿರ ಅಹಿಂದ ಮತದಾರರನ್ನು ಪಟ್ಟಿಯಿಂದ ಕೈಬಿಡಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾಡಿರುವ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು, ರಾಜ್ಯ ಸರ್ಕಾರವು ಪೊಲೀಸ್ ಇಲಾಖೆಯನ್ನು ದುರ್ಬಳಕೆ ಮಾಡಿಕೊಂಡು ಬಿಜೆಪಿ ಕಾರ್ಯಕರ್ತರನ್ನು ಬೆದರಿಸುವ ಕೆಲಸ ಮಾಡುತ್ತಿದೆ ಎಂದು ಆಪಾದಿಸಿದರು.

ಎಸ್‌ಐಆರ್‌ನಿಂದಾಗಿ ಮತಪಟ್ಟಿ ಸರಿಯಾದ ರೀತಿಯಲ್ಲಿ ಪರಿಷ್ಕರಣೆಯಾದ ಕಾರಣಕ್ಕೇ ಕೇರಳದಲ್ಲಿ ಕಾಂಗ್ರೆಸ್ ಅಧಿಕಾರ ಹಿಡಿಯಲು ಸಾಧ್ಯವಾಯಿತು ಎಂದು ಅಲ್ಲಿನ ಗೃಹ ಸಚಿವ ವಯಲಾರ್ ರವಿ ಮತ್ತು ಸಂಸದ ಶಶಿ ತರೂರ್ ಅವರೇ ಹೇಳಿದ್ದಾರೆ ಎಂದು ವಿಜಯೇಂದ್ರ ನೆನಪಿಸಿದರು.



## ದೆಹಲಿಯಲ್ಲಿ ಹೈಡ್ರಾಮಾ, ಪ್ರಿಯಾಂಕಾ ಗಾಂಧಿ ವಶಕ್ಕೆ

**ಸತ್ಯಮಿಥ್ಯ ಸುದ್ದಿಮೂಲ ನವದೆಹಲಿ:** ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ಮತ್ತು ಮತದಾರರ ಪಟ್ಟಿಯ ಪರಿಷ್ಕರಣೆಯಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳನ್ನು ಖಂಡಿಸಿ 'ಇಂಡಿಯಾ' (ಖಓಆಖಂ) ಮೈತ್ರಿಕೂಟದ ಸಂಸದರು ಮಂಗಳವಾರ ನಡೆಸಿದ ಬೃಹತ್ ಪ್ರತಿಭಟನೆ ರಾಷ್ಟ್ರ ರಾಜಧಾನಿಯಲ್ಲಿ ತೀವ್ರ ಸಂಚಲನ ಮೂಡಿಸಿದೆ.

ಸಂಸತ್ ಭವನದ ಆವರಣದಿಂದ ಚುನಾವಣಾ ಆಯೋಗದ ಕಚೇರಿಯತ್ತ ಮೆರವಣಿಗೆ ಆರಂಭಿಸಿದ ವಿಪಕ್ಷ ಸಂಸದರನ್ನು ಪೊಲೀಸರು ಭದ್ರತಾ ಬ್ಯಾರಿಕೇಡ್‌ಗಳನ್ನು ಅಳವಡಿಸಿ ತಡೆದರು.

ಈ ವೇಳೆ ಸಂಸದರ ನೇತೃತ್ವ ವಹಿಸಿದ್ದ ಲೋಕಸಭೆಯ ವಿಪಕ್ಷ ನಾಯಕ ರಾಹುಲ್ ಗಾಂಧಿ ಅವರು ಬ್ಯಾರಿಕೇಡ್ ಮೇಲೆ ಏರಿ, ಕೈಯಲ್ಲಿ ತ್ರಿವರ್ಣ ಧ್ವಜ ಬೀಸುವ ಮೂಲಕ ಕೇಂದ್ರ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಪೋಲಿಸರ ತಡೆಯ ನಂತರ ರಾಹುಲ್ ಗಾಂಧಿ ಹಾಗೂ ಪ್ರಿಯಾಂಕಾ ಗಾಂಧಿ ಸೇರಿದಂತೆ ಹಲವಾರು ಮಂದಿ ಸಂಸದರು ದೆಹಲಿಯ ಆಕಾಶವಾಣಿ ಭವನದ ಆವರಣದಲ್ಲಿ ಕುಳಿತು ಧರಣಿ ನಡೆಸಿದರು. ಈ ಸಂದರ್ಭದಲ್ಲಿ ರಸ್ತೆಯಲ್ಲೇ ಕುಳಿತು ಘೋಷಣೆ ಕೂಗುತ್ತಿದ್ದ ಕಾಂಗ್ರೆಸ್ ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ ಅವರನ್ನು ಪೊಲೀಸರು ವಶಕ್ಕೆ ಪಡೆದರು. ಇದರಿಂದಾಗಿ ದೆಹಲಿಯ ಪ್ರಮುಖ ರಸ್ತೆಗಳಲ್ಲಿ ಕೆಲಕಾಲ ಸಂಚಾರ ಅಸ್ತವ್ಯಸ್ತಗೊಂಡಿತು.

ರಾಹುಲ್ ಗಾಂಧಿ ವಾಗ್ದಾಳಿ:

ಪ್ರತಿಭಟನಾ ಸ್ಥಳದಲ್ಲಿ ಮಾತನಾಡಿದ ರಾಹುಲ್ ಗಾಂಧಿ, "ಮಹಾರಾಷ್ಟ್ರ, ಹರಿಯಾಣ, ಮಧ್ಯಪ್ರದೇಶ ಮತ್ತು ಪಶ್ಚಿಮ ಬಂಗಾಳ ರಾಜ್ಯಗಳ ಚುನಾವಣಾ ಪ್ರಕ್ರಿಯೆ ಕುರಿತು ಪ್ರಶ್ನೆ ಕೇಳಲು ಸುಮಾರು 300 ಪ್ರತಿಪಕ್ಷ ಸಂಸದರು ಬಂದಿದ್ದೇವೆ. ಕೋಟಿಗಟ್ಟಲೆ ಜನರ ಜನಾದೇಶ ಪಡೆದ ಜನಪ್ರತಿನಿಧಿಗಳನ್ನು ಭೇಟಿ ಮಾಡಲು ಸಿಇಸಿ ಜ್ಞಾನೇಶ್ ಕುಮಾರ್ ಏಕೆ ನಿರಾಕರಿಸುತ್ತಿದ್ದಾರೆ?" ಎಂದು ಪ್ರಶ್ನಿಸಿದರು.

ಮುಂದುವರಿದು, "ಪ್ರಧಾನಿ ನರೇಂದ್ರ ಮೋದಿ, ಅಮಿತ್ ಶಾ, ಮೋಹನ್ ಭಾಗವತ್ ಮತ್ತು ಜ್ಞಾನೇಶ್ ಕುಮಾರ್ ಸೇರಿ ದೇಶದ ಚುನಾವಣಾ ವ್ಯವಸ್ಥೆ ಹಾಗೂ ಪ್ರಜಾಪ್ರಭುತ್ವವನ್ನು ಧ್ವಂಸಗೊಳಿಸುತ್ತಿದ್ದಾರೆ. ಮೋದಿ ಮತ್ತು ಅಮಿತ್ ಶಾ ಜೋಡಿ ದೇಶದ ಚುನಾವಣಾ ಪ್ರಕ್ರಿಯೆಯನ್ನು ಹೈಜಾಕ್ ಮಾಡಿದೆ. ಅವರು ಮತಗಳನ್ನು ಕದಿಯದಿದ್ದರೆ ನಮ್ಮನ್ನು ಭೇಟಿಯಾಗಲು ತಕ್ಷಣವೇ ಸಿದ್ಧರಾಗುತ್ತಿದ್ದರು. ಕಳ್ಳತನ ಮಾಡಿರುವುದರಿಂದಲೇ ಎದುರಿಸಲು ಹೆದರುತ್ತಿದ್ದಾರೆ" ಎಂದು ಆರೋಪಿಸಿದರು.

ಭಾರತಕ್ಕೆ ದ್ರೋಹ ಬಗೆದ ಹಾಗೂ ಪ್ರಜಾಪ್ರಭುತ್ವ ಹೈಜಾಕ್ ಮಾಡಿದ ಯಾರೂ ತಪ್ಪಿಸಿಕೊಳ್ಳಲು ಆಗಲ್ಲ ಎಂದು ಆಕ್ರೋಶ ಹೊರಹಾಕಿದ ಅವರು, ಈ ಹೋರಾಟ ಕೇವಲ ರಾಜಕೀಯ ವಿರೋಧಕ್ಕಾಗಿ ಅಲ್ಲ; ದೇಶದ ಸಂವಿಧಾನ ಮತ್ತು ಪ್ರಜಾಪ್ರಭುತ್ವವನ್ನು ಉಳಿಸಲು 'ಇಂಡಿಯಾ' ಮೈತ್ರಿಕೂಟ ಬದ್ಧವಾಗಿದೆ ಎಂದು ಸ್ಪಷ್ಟಪಡಿಸಿದರು.



## ವರ್ಲ್ಡ್ ಚಾಂಪಿಯನ್‌ಶಿಪ್ ಆಫ್ ಲೆಜೆಂಡ್ಸ್: ಪಾಕಿಸ್ತಾನ ಚಾಂಪಿಯನ್ಸ್ ತಂಡ ಅಧಿಕೃತವಾಗಿ ಟೂರ್ನಿಯಿಂದ ಹೊರಕ್ಕೆ

**ಸತ್ಯಮಿಥ್ಯ ಸುದ್ದಿಮೂಲ ದುಬೈ:** ವರ್ಲ್ಡ್ ಚಾಂಪಿಯನ್‌ಶಿಪ್ ಆಫ್ ಲೆಜೆಂಡ್ಸ್‌ನ ಮೂರನೇ ಸೀಸನ್‌ನಿಂದ ಪಾಕಿಸ್ತಾನ ಚಾಂಪಿಯನ್ಸ್ ತಂಡ ಅಧಿಕೃತವಾಗಿ ಹಿಂದೆ ಸರಿದಿದೆ. ಟೂರ್ನಿಯಲ್ಲಿ ಭಾಗವಹಿಸಲು ಪಾಕಿಸ್ತಾನ ಕ್ರಿಕೆಟ್ ಮಂಡಳಿ (ಪಿಸಿಬಿ) ವಿಧಿಸಿದ್ದ ಕಠಿಣ ಷರತ್ತುಗಳನ್ನು ಆಯೋಜಕರು ತಿರಸ್ಕರಿಸಿದ ಹಿನ್ನೆಲೆಯಲ್ಲಿ ಈ ಬೆಳವಣಿಗೆ ನಡೆದಿದೆ.

ಕಳೆದ ಸೀಸನ್‌ನಲ್ಲಿ ಪಹಲ್ಗಾಮ್ ಉಗ್ರರ ದಾಳಿಯ ಹಿನ್ನೆಲೆಯಲ್ಲಿ ಭಾರತ ತಂಡವು ಪಾಕಿಸ್ತಾನದ ವಿರುದ್ಧ ಆಡಲು ನಿರಾಕರಿಸಿತ್ತು. ಗ್ರೂಪ್ ಹಂತ ಹಾಗೂ ಸೆಮಿಫೈನಲ್ ಪಂದ್ಯಗಳನ್ನು ಭಾರತ ಬಹಿಷ್ಕರಿಸಿದ್ದರಿಂದ, ಪಾಕಿಸ್ತಾನ ವಾಕ್ ಓವರ್ ಪಡೆದು ಫೈನಲ್ ಪ್ರವೇಶಿಸಿತ್ತು. ಆ ಸಮಯದಲ್ಲಿ ಪಾಕ್ ಆಟಗಾರರೊಂದಿಗೆ ಕೈಕುಲುಕಲು ಸಹ ಭಾರತೀಯ ಆಟಗಾರರು ಸಿದ್ಧರಿರಲಿಲ್ಲ.

ಕಳೆದ ವರ್ಷ ನಡೆದ ಈ ಘಟನೆಗಳಿಗೆ ಸಂಬಂಧಿಸಿದಂತೆ ಭಾರತದ ಆಟಗಾರರು ಲಿಖಿತವಾಗಿ ಕ್ಷಮೆ ಕೇಳಬೇಕು ಹಾಗೂ ಈ ಬಾರಿ ಕೈಕುಲುಕಲು ಒಪ್ಪಿಕೊಳ್ಳಬೇಕು ಎಂಬ ಪ್ರಮುಖ ಷರತ್ತನ್ನು ಪಿಸಿಬಿ ಆಯೋಜಕರ ಮುಂದಿಟ್ಟಿತ್ತು. ಆದರೆ, ಈ ಬೇಡಿಕೆಗಳನ್ನು ಒಪ್ಪಿಕೊಳ್ಳಲು ವರ್ಲ್ಡ್ ಚಾಂಪಿಯನ್‌ಶಿಪ್ ಆಫ್ ಲೆಜೆಂಡ್ಸ್ ಆಡಳಿತ ಮಂಡಳಿ ನಿರಾಕರಿಸಿದೆ.

ಆಯೋಜಕರು ಕೇವಲ ವಾಣಿಜ್ಯ ಷರತ್ತುಗಳನ್ನು ಮಾತ್ರ ಒಪ್ಪಿಕೊಂಡು, ಕ್ಷಮೆ ಕೇಳುವ ಪಿಸಿಬಿಯ ಬೇಡಿಕೆಯನ್ನು ತಳ್ಳಿಹಾಕಿದ್ದಾರೆ. ಇದರಿಂದಾಗಿ ಪಾಕಿಸ್ತಾನ ಕ್ರಿಕೆಟ್ ಮಂಡಳಿಯು ಟೂರ್ನಿಯಲ್ಲಿ ಆಡಲು ಎನ್‌ಒಸಿ (ಓಔಅ) ನೀಡಲು ನಿರಾಕರಿಸಿದೆ. ಪರಿಣಾಮವಾಗಿ, ಅಕ್ಟೋಬರ್ 10ರಂದು ನಡೆಯಬೇಕಿದ್ದ ಭಾರತ ಮತ್ತು ಪಾಕಿಸ್ತಾನ ನಡುವಿನ ರೋಚಕ ಪಂದ್ಯ ರದ್ದಾಗಿದೆ.

ಶಾಹಿದ್ ಅಫ್ರಿದಿ ನಾಯಕತ್ವದ ಪಾಕಿಸ್ತಾನ ತಂಡದ ಮೊದಲ ಪಂದ್ಯಗಳು ತಾಂತ್ರಿಕ ಕಾರಣಗಳಿಂದ ಈ ಹಿಂದೆಯೇ ಮುಂದೂಡಲ್ಪಟ್ಟಿದ್ದವು. ಕಳೆದ ಎರಡು ಸೀಸನ್‌ಗಳಲ್ಲಿ ರನ್ನರ್ ಅಪ್ ಆಗಿದ್ದ ಪಾಕಿಸ್ತಾನಕ್ಕೆ ಈ ಬಾರಿ ಟೂರ್ನಿಯಲ್ಲಿ ಭಾಗವಹಿಸಲು ಸಾಧ್ಯವಾಗುತ್ತಿಲ್ಲ. ಎನ್‌ಒಸಿ ಸಿಗದ ಕಾರಣ ಟೂರ್ನಿಯಿಂದ ಹಿಂದೆ ಸರಿಯುತ್ತಿರುವುದಾಗಿ ಹಾಗೂ ಮಂಡಳಿಯ ನಿರ್ಧಾರವನ್ನು ಗೌರವಿಸುವುದಾಗಿ ಪಾಕಿಸ್ತಾನ ಚಾಂಪಿಯನ್ಸ್ ಮ್ಯಾನೇಜ್‌ಮೆಂಟ್ ಅಧಿಕೃತ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

**ಭಾರತ–ಪಾಕ್ ಪಂದ್ಯಗಳಿಗೆ ಗರಿಷ್ಠ ವೀಕ್ಷಣೆ ದಾಖಲೆ:** ನಗೋಯಾ: ಇತ್ತೀಚೆಗೆ ನಡೆದ ಭಾರತ ಹಾಗೂ ಪಾಕಿಸ್ತಾನ ತಂಡಗಳ ನಡುವಿನ ಹಾಕಿ ಸೆಮಿಫೈನಲ್ ಹಾಗೂ ಕ್ರಿಕೆಟ್ ಫೈನಲ್ ಪಂದ್ಯಗಳು ಏಷ್ಯನ್ ಗೇಮ್ಸ್ ಇತಿಹಾಸದಲ್ಲೇ ಅತ್ಯಂತ ಹೆಚ್ಚು ವೀಕ್ಷಣೆ ಪಡೆದ ಪಂದ್ಯಗಳಾಗಿ ದಾಖಲೆ ಬರೆದಿವೆ ಎಂದು ಒಲಿಂಪಿಕ್ ಕೌನ್ಸಿಲ್ ಆಫ್ ಏಷ್ಯಾ (ಒಸಿಎ) ತಿಳಿಸಿದೆ. ಈ ಕುರಿತು ಮಾಹಿತಿ ನೀಡಿರುವ ಒಸಿಎ ಸಮನ್ವಯ ಸಮಿತಿ ಅಧ್ಯಕ್ಷ ತಯ್ಯಬ್ ಇಕ್ರಮ್, "ಏಷ್ಯಾಡ್‌ನ ಈ ಎರಡು ಪಂದ್ಯಗಳು ವೀಕ್ಷಣೆಯಲ್ಲಿ ಹೊಸ ದಾಖಲೆ ನಿರ್ಮಿಸಿವೆ. ಭಾರತ–ಪಾಕ್ ಕ್ರಿಕೆಟ್ ಫೈನಲ್ ಹಾಗೂ ಹಾಕಿ ಸೆಮಿಫೈನಲ್ ಪಂದ್ಯಗಳು ಅತಿ ಹೆಚ್ಚು ವೀಕ್ಷಣೆ ಪಡೆದುಕೊಂಡಿವೆ" ಎಂದು ಹೇಳಿದ್ದಾರೆ. ಆದರೆ, ವೀಕ್ಷಣೆಯ ನಿಖರ ಅಂಕಿಅಂಶಗಳನ್ನಾಗಲಿ ಅಥವಾ ಈ ಎರಡು ಪಂದ್ಯಗಳಲ್ಲಿ ಯಾವುದು ಹೆಚ್ಚು ವೀಕ್ಷಿಸಲ್ಪಟ್ಟಿದೆ ಎಂಬುದನ್ನಾಗಲಿ ಒಸಿಎ ಬಹಿರಂಗಪಡಿಸಿಲ್ಲ.





## ಏಷ್ಯನ್ ಗೇಮ್ಸ್ ಚಿನ್ನದ ಪದಕ ವಿಜೇತರಿಗೆ ಒಂದು ಕೋಟಿ ರೂ. ನಗದು ಪುರಸ್ಕಾರ

**ಬೆಂಗಳೂರು:** ಇತ್ತೀಚೆಗೆ ಮುಕ್ತಾಯವಾದ ಏಷ್ಯನ್ ಗೇಮ್ಸ್ 2026ರಲ್ಲಿ ಪದಕ ಗೆದ್ದು ದೇಶ ಹಾಗೂ ರಾಜ್ಯಕ್ಕೆ ಕೀರ್ತಿ ತಂದ ರಾಜ್ಯದ ಕ್ರೀಡಾಪಟುಗಳನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಉಪ ಮುಖ್ಯಮಂತ್ರಿಗಳು ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರಾದ ಡಾ. ಜಿ. ಪರಮೇಶ್ವರ್ ಅವರು ವಿಧಾನಸೌಧದಲ್ಲಿ ಸನ್ಮಾನಿಸಿ ಅಭಿನಂದಿಸಿದರು. ಈ ವೇಳೆ ಮಾತನಾಡಿದ ಜಿ. ಪರಮೇಶ್ವರ್ ಏಷ್ಯನ್ ಗೇಮ್ಸ್‌ನಲ್ಲಿ ರಾಜ್ಯದ ಕ್ರೀಡಾಪಟುಗಳು ತೋರಿದ ಸಾಧನೆಯನ್ನು ಗೌರವಿಸುವುದರ ಜೊತೆಗೆ, ಕರ್ನಾಟಕದ ಕ್ರೀಡಾ ಪ್ರತಿಭೆಗಳಿಗೆ ಹೆಚ್ಚಿನ ಆರ್ಥಿಕ ಪ್ರೋತ್ಸಾಹ, ಉದ್ಯೋಗ ಭದ್ರತೆ ಹಾಗೂ ಅಂತಾರಾಷ್ಟ್ರೀಯ ಮಟ್ಟದ ಸ್ಪರ್ಧೆಗಳಿಗೆ ಅಗತ್ಯ ನೆರವು ಕಲ್ಪಿಸುವ ಉದ್ದೇಶದಿಂದ ಸರ್ಕಾರ ಹಲವು ಮಹತ್ವದ ಕ್ರಮಗಳನ್ನು ಪ್ರಕಟಿಸಿದೆ ಎಂದು ತಿಳಿಸಿದರು.

**ನಗದು ಪುರಸ್ಕಾರ ಭಾರೀ ಹೆಚ್ಚಳ:** ಏಷ್ಯನ್ ಗೇಮ್ಸ್ ಪದಕ ವಿಜೇತರಿಗೆ ನೀಡಲಾಗುತ್ತಿದ್ದ ನಗದು ಪುರಸ್ಕಾರದ ಮೊತ್ತವನ್ನು ಪರಿಷ್ಕರಿಸಿ ಗಣನೀಯವಾಗಿ ಹೆಚ್ಚಿಸಲಾಗಿದೆ. ಈ ಹಿಂದೆ ಚಿನ್ನದ ಪದಕ ವಿಜೇತರಿಗೆ 35 ಲಕ್ಷ ರೂ, ಬೆಳ್ಳಿ ಪದಕ ವಿಜೇತರಿಗೆ 25 ಲಕ್ಷ ರೂ. ಹಾಗೂ ಕಂಚಿನ ಪದಕ ವಿಜೇತರಿಗೆ 15 ಲಕ್ಷ ರೂ. ನಗದು ಪುರಸ್ಕಾರ ನೀಡಲಾಗುತ್ತಿತ್ತು. ಪರಿಷ್ಕೃತ ಮೊತ್ತದ ಪ್ರಕಾರ, ಚಿನ್ನದ ಪದಕ ವಿಜೇತರಿಗೆ 1 ಕೋಟಿ ರೂ, ಬೆಳ್ಳಿ ಪದಕ ವಿಜೇತರಿಗೆ 75 ಲಕ್ಷ ರೂ ಮತ್ತು ಕಂಚಿನ ಪದಕ ಗೆದ್ದರೆ 50 ಲಕ್ಷ ರೂ. ನಗದು ಪುರಸ್ಕಾರ ನೀಡಲಾಗುವುದು ಎಂದರು. ಈ ಬಾರಿ ಎಂಟು ಮಂದಿಗೆ ಈ ನಗದು ಪುರಸ್ಕಾರ ಸಿಗಲಿದ್ದು, ಜೊತೆ–ಗೆ ಈ ಎಂಟು ಪದಕ ವಿಜೇತರಿಗೆ ಏಷ್ಯನ್ ಗೇಮ್ಸ್ 2026ರಲ್ಲಿ ಭಾಗವಹಿಸಿದ್ದಕ್ಕಾಗಿ, ಪದಕ ಸಾಧನೆಗೆ ನೀಡಲಾಗುವ ನಗದು ಪುರಸ್ಕಾರದ ಹೆಚ್ಚುವರಿಯಾಗಿ ತಲಾ 5 ಲಕ್ಷ ರೂ. ಪ್ರೋತ್ಸಾಹಧನ ನೀಡಲಾಗುವುದು. ಕ್ರೀಡಾಪಟುಗಳ ಸಾಧನೆಗೆ ತಕ್ಕ ಗೌರವ ನೀಡುವ ಹಾಗೂ ಮುಂದಿನ ಕ್ರೀಡಾಪಟುಗಳಿಗೆ ಇನ್ನಷ್ಟು ಪ್ರೇರಣೆ ನೀಡುವ ಉದ್ದೇಶದಿಂದ ನಗದು ಪುರಸ್ಕಾರದ ಮೊತ್ತವನ್ನು ಹೆಚ್ಚಿಸಲಾಗಿದೆ ಎಂದು ಅವರು ತಿಳಿಸಿದರು.

**10 ಲಕ್ಷ ಪ್ರೋತ್ಸಾಹಧನ:** ಒಲಿಂಪಿಕ್ಸ್‌ನಲ್ಲಿ ಕರ್ನಾಟಕದ ಕ್ರೀಡಾಪಟುಗಳ ಭಾಗವಹಿಸುವಿಕೆ ಮತ್ತು ಸಾಧನೆಯನ್ನು ಹೆಚ್ಚಿಸುವ ಉದ್ದೇಶದಿಂದ ಜಾರಿಗೊಳಿಸಿರುವ ಒಲಿಂಪಿಕ್ಸ್' ಯೋಜನೆಯಡಿ 2026–27ನೇ ಸಾಲಿಗೆ ಏಷ್ಯನ್ ಗೇಮ್ಸ್ ಹಾಗೂ ಕಾಮನ್‌ವೆಲ್ತ್ ಗೇಮ್ಸ್ ಪದಕ ವಿಜೇತರ ಪೈಕಿ ಆಯ್ದ ನಾಲ್ವರು ಕ್ರೀಡಾಪಟುಗಳನ್ನು (ಎಂ.ಆರ್.ಪೂವಮ್ಮ, ಸ್ನೇಹಾ ಎಸ್.ಎಸ್., ಶ್ರೇಯಾಂಕ ಪಾಟೀಲ್, ಶಿಲ್ಪಾ ಕೆ.ಎಸ್) ಸೇರ್ಪಡೆ ಮಾಡಲಾಗಿದೆ. ಈ ಕ್ರೀಡಾಪಟುಗಳಿಗೆ ಒಲಿಂಪಿಕ್ಸ್ ಸಿದ್ಧತೆ, ತರಬೇತಿ ಹಾಗೂ ಇತರೆ ಅಗತ್ಯಗಳಿಗೆ ಪ್ರಸಕ್ತ ಸಾಲಿನಲ್ಲಿ ತಲಾ 10 ಲಕ್ಷ ನಗದು ಪ್ರೋತ್ಸಾಹಧನ ನೀಡಲಾಗುವುದು.

ರಾಜ್ಯದ ಪ್ರತಿಭಾವಂತ ಕ್ರೀಡಾಪಟುಗಳಿಗೆ ಉತ್ತಮ ತರಬೇತಿ ಹಾಗೂ ಅಗತ್ಯ ಆರ್ಥಿಕ ನೆರವು ಒದಗಿಸುವ ಮೂಲಕ ಒಲಿಂಪಿಕ್ಸ್ ಸೇರಿದಂತೆ ಜಾಗತಿಕ ಕ್ರೀಡಾಕೂಟಗಳಲ್ಲಿ ಹೆಚ್ಚಿನ ಪದಕಗಳನ್ನು ಗೆಲ್ಲುವಂತೆ ಸಜ್ಜುಗೊಳಿಸುವುದು ಯೋಜನೆಯ ಪ್ರಮುಖ ಉದ್ದೇಶವಾಗಿದೆ. ಸಾಧಕ ಕ್ರೀಡಾಪಟುಗಳ ಭವಿಷ್ಯಕ್ಕೆ ಉದ್ಯೋಗ ಭದ್ರತೆ ಕಲ್ಪಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರದ ನೇರ ನೇಮಕಾತಿಗಳಲ್ಲಿ ಕ್ರೀಡಾಪಟುಗಳಿಗೆ 2% ಮೀಸಲಾತಿ ನೀಡಲಾಗಿದೆ. ಈ ಕುರಿತು 03–10–2026ರಂದು ಅಧಿಸೂಚನೆ ಹೊರಡಿಸಲಾಗಿದ್ದು, ರಾಜ್ಯ ಸರ್ಕಾರದ ಎಲ್ಲ ಹಂತದ ಗ್ರೂಪ್–ಎ, ಗ್ರೂಪ್–ಬಿ, ಗ್ರೂಪ್–ಸಿ ಮತ್ತು ಗ್ರೂಪ್–ಡಿ ಹುದ್ದೆಗಳ ನೇರ ನೇಮಕಾತಿಯಲ್ಲಿ ಸಾಧಕ ಕ್ರೀಡಾಪಟುಗಳಿಗೆ 2% ಮೀಸಲಾತಿ ಕಲ್ಪಿಸಲಾಗಿದೆ.



ಸತ್ಯಮಿಥ್ಯ
SATYA MITHI
Kannada Daily Morning

# ಸಾಲ ತೀರಿಸಿ ದಾಖಲೆ ಮರಳಿ ಪಡೆಯಿರಿ!

## ಬಡ್ಡಿ ಹೆಚ್ಚುವ ಮುನ್ನ ಸಾಲ ಮುಕ್ತಾಯಗೊಳಿಸಲು ನಿವೃತ್ತ ಸೈನಿಕರ ಸಂಘದ ಅಧ್ಯಕ್ಷ ಶಿವಪುತ್ರಪ್ಪ ಕರೆ

**ಸತ್ಯಮಿಥ್ಯ ಸುದ್ದಿಮೂಲ ನರೇಗಲ್ಲ :**
ಬ್ಯಾಂಕ್‌ನಲ್ಲಿ ಯಾವುದೇ ರೀತಿಯ ಸಾಲ ಪಡೆದಿದ್ದರೂ ಅದನ್ನು ಹೆಚ್ಚು ದಿನಗಳ ಕಾಲ ಬಾಕಿ ಉಳಿಸಿಕೊಳ್ಳದೆ ಶೀಘ್ರವಾಗಿ ಮರುಪಾವತಿಸಿ, ಸಾಲ ಪಡೆಯುವ ಸಂದರ್ಭದಲ್ಲಿ ಬ್ಯಾಂಕ್‌ಗೆ ನೀಡಿರುವ ಮೂಲ ದಾಖಲೆಗಳನ್ನು ಮರಳಿ ಪಡೆದುಕೊಳ್ಳಬೇಕು ಎಂದು ನಿವೃತ್ತ ಸೈನಿಕರ ಸಂಘದ ಅಧ್ಯಕ್ಷ ಶಿವಪುತ್ರಪ್ಪ ಸಂಗನಾಳ ಸಲಹೆ ನೀಡಿದರು.
ಪಟ್ಟಣದ ನಿವೃತ್ತ ಸೈನಿಕರ ಸಂಘದ ಕಚೇರಿಯಲ್ಲಿ ಭಾನುವಾರ ನಡೆದ ಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.
ಸಾಲವನ್ನು ದೀರ್ಘಕಾಲ ಮುಂದುವರಿಸಿಕೊಂಡು ಹೋಗುವುದರಿಂದ ಬಡ್ಡಿ ಮೊತ್ತ ಹೆಚ್ಚುತ್ತಲೇ ಹೋಗುತ್ತದೆ. ಇದರಿಂದ ಸಾಲಗಾರರ ಮೇಲಿನ ಆರ್ಥಿಕ ಹೊರೆ ಮತ್ತಷ್ಟು ಹೆಚ್ಚಾಗುತ್ತದೆ. ಹೀಗಾಗಿ ಸಾಧ್ಯವಾದಷ್ಟು ಬೇಗ ಸಾಲ ಮರುಪಾವತಿ ಮಾಡಿ, ಬ್ಯಾಂಕ್‌ನಿಂದ ಅನಾಪೇಕ್ಷಣಾ ಪತ್ರ, ಸಾಲ ಮುಕ್ತಾಯ ಪತ್ರ, ಸಂಪೂರ್ಣ ಪಾವತಿ ಪತ್ರ, ಭದ್ರತಾ ದಾಖಲೆ ಬಿಡುಗಡೆ ಪತ್ರ ಹಾಗೂ ಮೂಲ ಸಾಲ ಒಪ್ಪಂದದ ದಾಖಲೆಗಳನ್ನು ಪಡೆದುಕೊಳ್ಳಬೇಕು ಎಂದರು.
ಸಾಲ ಸಂಪೂರ್ಣವಾಗಿ ತೀರಿಸಿದ ನಂತರವೂ ಬ್ಯಾಂಕ್‌ನಲ್ಲಿ ದಾಖಲೆಗಳು ಉಳಿಯದಂತೆ ನೋಡಿಕೊಳ್ಳುವುದು ಮುಖ್ಯ. ಸಾಲ ಮುಕ್ತಾಯಗೊಂಡಿರುವುದಕ್ಕೆ ಸಂಬಂಧಿಸಿದ ಎಲ್ಲ ದಾಖಲೆಗಳನ್ನು ಪಡೆದುಕೊಂಡು ಸುರಕ್ಷಿತವಾಗಿ ಇಟ್ಟುಕೊಳ್ಳಬೇಕು ಎಂದು ಅವರು ಕಿವಿಮಾತು ಹೇಳಿದರು.
**ನಿವೃತ್ತ ಯೋಧರಿಗೆ ಬಾಕಿ ವೇತನದ ಸೌಲಭ್ಯ:** 1986ರಲ್ಲಿ ಸೇವಾ ನಿವೃತ್ತಿ ಹೊಂದಿದ ಬಿಎಸ್‌ಎಫ್ ಹಾಗೂ ಸಿಆರ್‌ಪಿಎಫ್ ಯೋಧರಿಗೆ ವೇತನ ಹೆಚ್ಚಳಕ್ಕೆ ಸಂಬಂಧಿಸಿದ ಬಾಕಿ ಹಣ ಬರಬೇಕಿದ್ದು, 1986ರ ನಂತರ ಸೇವಾ ನಿವೃತ್ತರಾದವರಿಗೂ ಈ ಸೌಲಭ್ಯ ದೊರೆಯಲಿದೆ ಎಂದು ಸಂಗನಾಳ ತಿಳಿಸಿದರು. **ಜಾತ್ರೆಯಲ್ಲಿ ಅನ್ನ ಸಂತರ್ಪಣೆ:** ಮುಂಬರುವ ನವೆಂಬರ್ ತಿಂಗಳಲ್ಲಿ ಪಟ್ಟಣದ ಶ್ರೀ ಹಿರೇಮಠದ ಜಾತ್ರಾ ಮಹೋತ್ಸವ ನಡೆಯಲಿದೆ. ಒಂಬತ್ತು ದಿನಗಳ ಕಾಲ ನಡೆಯಲಿರುವ ಜಾತ್ರೆಯಲ್ಲಿ ನಿವೃತ್ತ ಸೈನಿಕರ ಸಂಘದ ವತಿಯಿಂದ ಒಂದು ದಿನ ಅನ್ನ ಸಂತರ್ಪಣೆ ಆಯೋಜಿಸುವ ಕುರಿತು ಸಭೆಯಲ್ಲಿ ಚರ್ಚಿಸಿ, ಒಮ್ಮತದ ಸಮ್ಮತಿ ಸೂಚಿಸಿದರು.
**ಮೃತ ಯೋಧರ ಕುಟುಂಬಕ್ಕೆ ಮನೆ ನಿರ್ಮಾಣ ನೆರವು:** 1999ರಿಂದ 2026ರ ಅವಧಿಯಲ್ಲಿ ಸೇವಾ ನಿವೃತ್ತಿ ಹೊಂದಿದ ಸಿಆರ್‌ಪಿಎಫ್ ಯೋಧರಲ್ಲಿ ಯಾರಾದರೂ ಮೃತಪಟ್ಟಿದ್ದರೆ, ಅವರ ಪತ್ನಿಯರಿಗೆ ಮನೆ ನಿರ್ಮಾಣಕ್ಕೆ ಶ್ರೀ ಸಿಮೆಂಟ್ ವತಿಯಿಂದ 720 ಸಿಮೆಂಟ್ ಚೀಲಗಳನ್ನು ಉಚಿತವಾಗಿ ನೀಡಲಾಗುವುದು ಎಂದು ಸಂಗನಾಳ ಹೇಳಿದರು. ಸೌಲಭ್ಯ ಪಡೆಯಲು ಪಿಪಿಓ, ಆಸ್ಪತ್ರೆಯ ದಾಖಲೆಗಳು, ಮನೆ ವಿಳಾಸ ದೃಢೀಕರಣ, ಕಟ್ಟಡದ ಯೋಜನಾ ನೀಲನಕ್ಷೆ, ನಿವೇಶನದ ನೋಂದಾಯಿತ ಪ್ರತಿ ಹಾಗೂ ಆಧಾರ್ ಕಾರ್ಡ್ ಸೇರಿದಂತೆ ಅಗತ್ಯ ದಾಖಲೆಗಳನ್ನು ಸಿಆರ್‌ಪಿಎಫ್ ಗುಂಪಿಗೆ ಕಳುಹಿಸಬೇಕು. ಬಳಿಕ ಸಂಬಂಧಪಟ್ಟವರನ್ನು ಸಂಪರ್ಕಿಸಿ ಅಗತ್ಯ ನೆರವು ಒದಗಿಸಲಾಗುವುದು ಎಂದರು.
ಸಭೆಯಲ್ಲಿ ಶಿವಪ್ಪ ಶಿವಾಪುರ, ಪ್ರಭುದೇವ ಮುಕ್ಕನಗೌಡ್ರ, ಮಲ್ಲಿಕಾರ್ಜುನ ಮಲ್ಲನಗೌಡ್ರ, ದಾವಲಸಾಬ್ ಕಿಲ್ಲೇದಾರ, ಈಶ್ವರಚಂದ್ರ ಬಾಗಲಿ, ಬಸವರಾಜ ಯಕ್ಕುಂಡಿ, ಮಂದಾಲಪ್ಪ ಸಂಗನಾಳ, ರಾಮಪ್ಪ ರೋಣದ, ರೇವಣಸಿದ್ಧಪ್ಪ ನರಗುಂದ, ಉಮೇಶ ಕರಮುಡಿ, ಬಸವೇಶ್ವರ ಚಿಕ್ಕೊಪ್ಪದ, ಚಂದ್ರಶೇಖರ ಹತ್ತಿ, ಶರಣಪ್ಪ ನಾಶಿಪುಡಿ, ಈರಪ್ಪ ದೊಡ್ಡಣ್ಣವರ, ಕುಮಾರಸ್ವಾಮಿ ಕೋರಧಾನ್ಯಮಠ, ಸಿದ್ದರಾಮಪ್ಪ ಕಟ್ಟಿಮನಿ, ಸುಮಿತ್ರಾಬಾಯಿ ದಳವಾಯಿ, ಶಿವಾನಂದ ಬಂಡಿಹಾಳ, ಗುರುಶಾಂತಗೌಡ ಮಲ್ಲನಗೌಡ್ರ, ಇಮಾಮಸಾಬ್ ಕೋಲಕಾರ, ಬಸವರಾಜ ಕಡೇತೋಟದ ಸೇರಿದಂತೆ ಹಲವರು ಉಪಸ್ಥಿತರಿದ್ದರು.



# ಢಾಯಿ ಆಖರ್ ಪತ್ರ ಬರವಣಿಗೆ ಸ್ಪರ್ಧೆಯಲ್ಲಿ ಜಿಲ್ಲೆಗೆ ತೃತೀಯ ಸ್ಥಾನ

**ಹಾವೇರಿ:** ಭಾರತ ಸರ್ಕಾರದ ಸಂವಹನ ಸಚಿವಾಲಯದ ಅಂಚೆ ಇಲಾಖೆ ವತಿಯಿಂದ 2025–26ನೇ ಸಾಲಿನಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರ ಮಟ್ಟದ Dhal Akhar - Letter to My Role Model ಪತ್ರ ಬರವಣಿಗೆ ಸ್ಪರ್ಧೆಯಲ್ಲಿ, ಹಾವೇರಿಯ ಶಿವಾಜಿ ನಗರ ನಿವಾಸಿ ಶ್ರೀಮತಿ ಸುಲಕ್ಷಣಾ ಶಿವಪುರ ಅವರು ರಾಜ್ಯ ಮಟ್ಟದಲ್ಲಿ (Karnataka Circle Level) 18 ವರ್ಷ ಮೇಲ್ಪಟ್ಟ 1000 ಪದಗಳ ಅಂಚೆ ಲಕೋಟೆ ವಿಭಾಗದಲ್ಲಿ ರಾಜ್ಯ ಮಟ್ಟದಲ್ಲಿ ತೃತೀಯ ಬಹುಮಾನ ಪಡೆದಿದ್ದಾರೆ.
ಅಕ್ಟೋಬರ್ 1 ರಂದು ಹಾವೇರಿ ವಿಭಾಗದ ಅಂಚೆ ಅಧೀಕ್ಷಕ ಮಂಜುನಾಥ್ ಜಿ. ಹುಬ್ಬಳ್ಳಿ ಅವರು, ಬಹುಮಾನ ವಿಜೇತರಾದ ಶ್ರೀಮತಿ ಸುಲಕ್ಷಣಾ ಶಿವಪುರ ಅವರನ್ನು ಅಂಚೆ ಇಲಾಖೆಯ ಪರವಾಗಿ ಸನ್ಮಾನಿಸಿ, ರೂ. 5,000/– ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರವನ್ನು ವಿತರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅಧೀಕ್ಷಕರು, ಇಲಾಖೆಯ ಇಂತಹ ಪತ್ರಲೇಖನ ಸ್ಪರ್ಧೆಗಳು ಯುವಜನರಲ್ಲಿ ಬರವಣಿಗೆ ಕೌಶಲ್ಯ ಮತ್ತು ಸೃಜನಶೀಲತೆಯನ್ನು ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ಇಂತಹ ಸ್ಪರ್ಧೆಯಲ್ಲಿ ರಾಜ್ಯಮಟ್ಟಕ್ಕೆ ತೃತೀಯ ಸ್ಥಾನವನ್ನು ಪಡೆದು ನಮ್ಮ ಜಿಲ್ಲೆಗೆ ಕೀರ್ತಿ ತಂದಿದ್ದಾರೆ. ಇದು ನಮ್ಮೆಲ್ಲರಿಗೂ ಹೆಮ್ಮೆಯ ವಿಷಯವಾಗಿದೆ. 2026–27ನೇ ಸಾಲಿನ ಢಾಯಿ ಆಖರ್ ರಾಷ್ಟ್ರೀಯ ಪತ್ರ ಬರವಣಿಗೆ ಸ್ಪರ್ಧೆಯನ್ನು ಈಗಾಗಲೇ ಘೋಷಿಸಲಾಗಿದ್ದು, ಈ ಬಾರಿಯ ವಿಷಯ A Letter to Mother Earth: My Promise to Protect Nature / ಭೂಮಿ ತಾಯಿಗೆ ಒಂದು ಪತ್ರ: ಪ್ರಕೃತಿಯನ್ನು ರಕ್ಷಿಸುವುದು ನನ್ನ ಪ್ರತಿಜ್ಞೆ ಆಗಿರುತ್ತದೆ. ಆಸಕ್ತ ಸ್ಪರ್ಧಾಳುಗಳು ದಿನಾಂಕ 31–10–2026 ರೊಳಗೆ ತಮ್ಮ ಪತ್ರಗಳನ್ನು ಹತ್ತಿರದ ಅಂಚೆ ಕಚೇರಿಯಲ್ಲಿ ಸಲ್ಲಿಸಿ ಈ ಸ್ಪರ್ಧೆಯ ಸದುಪಯೋಗವನ್ನು ಎಲ್ಲರೂ ಪಡೆದುಕೊಳ್ಳಬೇಕು ಎಂದು ತಿಳಿಸಿದರು.
ಪ್ರಶಸ್ತಿ ವಿಜೇತರಾದ ಶ್ರೀಮತಿ ಸುಲಕ್ಷಣಾ ಶಿವಪುರ ಮಾತನಾಡಿ, "ಅಂಚೆ ಇಲಾಖೆ ವತಿಯಿಂದ ನಡೆಸಲಾಗುವ ಢಾಯಿ ಅಖರ್ ಪತ್ರಲೇಖನ ಸ್ಪರ್ಧೆಯಲ್ಲಿ ಭಾಗವಹಿಸುವುದೇ ಒಂದು ಹೆಮ್ಮೆಯ ವಿಷಯ. ಪ್ರಶಸ್ತಿ ಬಂದಿರುವುದು ಅತೀವ ಆನಂದ ತಂದಿದೆ. ಎಲ್ಲರೂ ಇಂತಹ ಕಾರ್ಯಕ್ರಮಗಳಲ್ಲಿ ಸ್ವಯಂಪ್ರೇರಿತರಾಗಿ ಭಾಗವಹಿಸಬೇಕು" ಎಂದರು.
ಸ್ಥಾನಿಕ ಸಹಾಯಕ ಅಂಚೆ ಅಧೀಕ್ಷಕ ಶಿವಾನಂದ ರಬಕವಿ, ಹಾವೇರಿ ಉಪ ವಿಭಾಗದ ಸಹಾಯಕ ಅಂಚೆ ಅಧೀಕ್ಷ ಎನ್.ಜಿ.ಬಂಗಿಗೌಡ್ರ ಹಾಗೂ ಅಂಚೆ ಸಿಬ್ಬಂದಿವರ್ಗದವರು ಉಪಸ್ಥಿತರಿದ್ದರು.




# ಕುಷ್ಟಗಿ ತಾಲ್ಲೂಕು ಮಟ್ಟದ 'ಯುವ ಸಂಸತ್' ಆಯೋಜನೆ: ತಹಶೀಲ್ದಾರ್ ಕಚೇರಿಯಲ್ಲಿ ಪೂರ್ವಭಾವಿ ಸಭೆ

**ಸತ್ಯಮಿಥ್ಯ ಸುದ್ದಿಮೂಲ ಕೊಪ್ಪಳ :**
ವಿದ್ಯಾರ್ಥಿಗಳಲ್ಲಿ ಪ್ರಜಾಪ್ರಭುತ್ವದ ಮೌಲ್ಯಗಳು ಹಾಗೂ ಸಂಸದೀಯ ಕಲಾಪಗಳ ಬಗ್ಗೆ ಪ್ರಾಯೋಗಿಕ ಅರಿವು ಮೂಡಿಸುವ ಉದ್ದೇಶದಿಂದ ಕುಷ್ಟಗಿ ತಾಲ್ಲೂಕು ಮಟ್ಟದಲ್ಲಿ 'ಯುವ ಸಂಸತ್' ಸ್ಪರ್ಧೆಯನ್ನು ಹಮ್ಮಿಕೊಳ್ಳುವ ಕುರಿತಂತೆ ಸೋಮವಾರ ತಹಶೀಲ್ದಾರ್ ಕಚೇರಿಯಲ್ಲಿ ಪೂರ್ವಭಾವಿ ಸಭೆ ನಡೆಯಿತು.
ಸಭೆಯ ಅಧ್ಯಕ್ಷತೆ ವಹಿಸಿದ್ದ ಕುಷ್ಟಗಿ ತಹಶೀಲ್ದಾರ್ ಅಶೋಕ ಶಿಗ್ಗಾವಿ ಅವರು ಮಾತನಾಡಿ, ವಿಶ್ವದ ಅತಿ ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾದ ಭಾರತದ ಸಂಸತ್ ಕಾರ್ಯವೈಖರಿ, ಪ್ರಶ್ನೋತ್ತರ ಅವಧಿ, ಶೂನ್ಯ ವೇಳೆ ಹಾಗೂ ಮಸೂದೆ ಮಂಡನೆ ಕುರಿತು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವುದು ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ. ಹಾಗಾಗಿ ಕುಷ್ಟಗಿ ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆಡಿಟೋರಿಯಂ ಹಾಲ್‌ನಲ್ಲಿ ಯುವ ಸಂಸತ್ ಸ್ಪರ್ಧೆಯನ್ನು ವ್ಯವಸ್ಥಿತವಾಗಿ ಆಯೋಜಿಸಲಾಗುವುದು ಎಂದು ತಿಳಿಸಿದರು.




ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ತುಗ್ಗಲಪ್ಪ ಅವರು ಮಾತನಾಡಿ, ಯುವ ಸಂಸತ್ ಸ್ಪರ್ಧೆಯಲ್ಲಿ ವಿದ್ಯಾರ್ಥಿಗಳೇ ಸಭಾಧ್ಯಕ್ಷರು, ಸಭಾಪತಿ, ಮುಖ್ಯಮಂತ್ರಿ, ವಿರೋಧ ಪಕ್ಷದ ನಾಯಕ, ಸಚಿವರು ಮತ್ತು ಮಾರ್ಷಲ್‌ಗಳಾಗಿ ಜವಾಬ್ದಾರಿ ನಿರ್ವಹಿಸಲಿದ್ದಾರೆ. ಪ್ರಸ್ತುತ ಸಮಾಜವನ್ನು ಕಾಡುತ್ತಿರುವ ಬರ ನಿರ್ವಹಣೆ, ನಿರುದ್ಯೋಗ, ರೈತರ ಸಮಸ್ಯೆಗಳು, ಕೊಪ್ಪಳ ಏತ ನೀರಾವರಿ ಯೋಜನೆ, 371(ಜೆ) ಕಲಂ ತಾರತಮ್ಯ, ಮಾದಕ ವ್ಯಸನ ಮುಕ್ತ ಸಮಾಜ, ಮಹಿಳೆಯರ ಮೇಲಿನ ದೌರ್ಜನ್ಯ ಹಾಗೂ ಬಾಲ್ಯ ವಿವಾಹ ತಡೆ ಕುರಿತು ಚರ್ಚೆಗಳು ನಡೆಯಲಿದ್ದು, ಅತ್ಯುತ್ತಮ 3 ವಿಷಯಗಳನ್ನು ಜಿಲ್ಲಾ ಹಂತಕ್ಕೆ ಶಿಫಾರಸು ಮಾಡಲಾಗುವುದು ಎಂದು ವಿವರಿಸಿದರು.
ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಅಂಗವಾಗಿ ಈ ಸ್ಪರ್ಧೆಗೆ ಅಧಿಕೃತ ಚಾಲನೆ ಸಿಗಲಿದ್ದು, ತಾಲ್ಲೂಕು ವಕೀಲರ ಸಂಘದ ಸಹಯೋಗದೊಂದಿಗೆ ಕಾರ್ಯಕ್ರಮ ಆಯೋಜಿಸಲು ಮತ್ತು ನಿಯಮಾನುಸಾರ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವ ಬಗ್ಗೆ ಸಭೆಯಲ್ಲಿ ನಿರ್ಧರಿಸಲಾಯಿತು. ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಕಚೇರಿ ವ್ಯವಸ್ಥಾಪಕರಾದ ಬಸವರಾಜ ಚಳಗೇರಿ, ಲೋಕೇಶ ಗೋಟರು, ಡಾ. ಆನಂದ ಗೋಟರು, ಪ್ರಾಚಾರ್ಯ ಶ್ರೀಕಾಂತ ಸರಗಣಾಚಾರಿ, ಉಪನ್ಯಾಸಕಿ ಡಾ. ಸೌಮ್ಯ, ವೀರಪ್ಪ ಸಗಮದ, ಬಸವರಾಜ ಅಂಗಡಿ, ಕೆ.ಎಸ್. ಹುಲ್ಲಿ, ಲಲಿತಮ್ಮ, ವಿದ್ಯಾವತಿ ಗೋಟರು, ಯನಮನೂರಪ್ಪ, ತಿಪ್ಪಣ್ಣ, ಪ್ರಾಚಾರ್ಯ ಡಾ. ಎಸ್.ಸಿ. ತಿಪ್ಪಾಶೆಟ್ಟಿ ಮತ್ತಿತರರು ಉಪಸ್ಥಿತರಿದ್ದರು.

# ನರೇಗಲ್ಲನಲ್ಲಿ 2.091 ಕೆ.ಜಿ. ಗಾಂಜಾ ಜಪ್ತಿ, ಆರೋಪಿ ಬಂಧನ

**ಸತ್ಯಮಿಥ್ಯ ಸುದ್ದಿಮೂಲ ನರೇಗಲ್:**
ಪಟ್ಟಣದ ಈಶ್ವರ ನಗರದಲ್ಲಿ ಗಾಂಜಾ ಸಂಗ್ರಹಿಸಿಟ್ಟು ಮಾರಾಟ ಮಾಡಲು ಯತ್ನಿಸುತ್ತಿದ್ದ ಆರೋಪಿಯನ್ನು ಬಂಧಿಸಿ, ಆತನಿಂದ 1,04,550 ರೂ ಮೌಲ್ಯದ 2.091 ಕೆ.ಜಿ. ಗಾಂಜಾವನ್ನು ನರೇಗಲ್ ಪೊಲೀಸ್ ಠಾಣೆ ಸಿಬ್ಬಂದಿ ಜಪ್ತಿ ಮಾಡಿದ್ದಾರೆ.



ಬಸವರಾಜ್ ತಂದೆ ಕಟ್ಟಪ್ಪ ಹರಣಶಿಕಾರಿ ಬಂಧಿತ ಆರೋಪಿ.
ದಿನಾಂಕ 05.10.2026 ರಂದು ನರೇಗಲ್ ಪಟ್ಟಣದ ಬೀಟ್ ಸಿಬ್ಬಂದಿಯಿಂದ ದೊರೆತ ಖಚಿತ ಮಾಹಿತಿಯ ಮೇರೆಗೆ ಪೊಲೀಸರು ಆರೋಪಿತನ ಮನೆಯ ಮೇಲೆ ದಾಳಿ ನಡೆಸಿದ್ದರು. ಈ ವೇಳೆ ಮನೆಯ ದೇವರ ಕೋಣೆಯಲ್ಲಿದ್ದ ಕಟ್ಟೆಯ ಮೇಲೆ ಬ್ರೌನ್ ಬಣ್ಣದ ಟಿಕ್ಸು ಟೇಪ್‌ನಿಂದ ಸುತ್ತಿದ ಪಾಕೆಟ್ ಪತ್ತೆಯಾಗಿದ್ದು, ಪರಿಶೀಲಿಸಿದಾಗ ಅದರಲ್ಲಿ ಒಣಗಿದ ಎಲೆಗಳು ಹಾಗೂ ಬೀಜಗಳಿರುವ ಗಾಂಜಾ ಪತ್ತೆಯಾಗಿದೆ. ವಿಚಾರಣೆ ವೇಳೆ ಆರೋಪಿತನು ಈ ಗಾಂಜಾವನ್ನು ಮಹಾರಾಷ್ಟ್ರದಿಂದ ತಂದು ಸಂಗ್ರಹಿಸಿ ಮಾರಾಟ ಮಾಡುತ್ತಿದ್ದಾಗಿ ಮಾಹಿತಿ ನೀಡಿದ್ದಾನೆ. ವಿಶೇಷವೆಂದರೆ, ಇದೇ ಆರೋಪಿ ಈ ಹಿಂದೆ ನರೇಗಲ್ ಪೊಲೀಸ್ ಠಾಣೆ ಗುನ್ನೆ ನಂ. 55/2026 ರ ಪ್ರಕರಣದಲ್ಲೂ ಆರೋಪಿಯಾಗಿದ್ದು, ಆ ಸಂದರ್ಭದಲ್ಲೂ ಆತನಿಂದ 33,100/– ಮೌಲ್ಯದ 331 ಗ್ರಾಂ ಗಾಂಜಾವನ್ನು ವಶಪಡಿಸಿಕೊಳ್ಳಲಾಗಿತ್ತು. ಈ ಕುರಿತು ನರೇಗಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗಿದೆ ಎಂದು ಗದಗ ಜಿಲ್ಲಾ ಪೊಲೀಸ್ ಪ್ರಕಟಣೆ ತಿಳಿಸಿದೆ.

# ಜಿಲ್ಲಾ ಮಟ್ಟದ ವಿಶ್ವ ರೇಬಿಸ್ ದಿನಾಚರಣೆ, ವಿಶ್ವ ಹೃದಯ ದಿನಾಚರಣೆ

**ಸತ್ಯಮಿಥ್ಯ ಸುದ್ದಿಮೂಲ ಗದಗ :**
ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಉಪ ಅರಣ್ಯ ಸಂರಕ್ಷಣಾ ಅಧಿಕಾರಿಗಳ ಕಛೇರಿ, ಪ್ರಾದೇಶಿಕ ವಿಭಾಗ, ಜಿಲ್ಲಾ ಸಮೀಕ್ಷಣಾ ಘಟಕ, ಜಿಲ್ಲಾ ಮಾಹಿತಿ ಶಿಕ್ಷಣ ಮತ್ತು ಸಂವಹನ ವಿಭಾಗ, ತಾಲೂಕ ಆರೋಗ್ಯಾಧಿಕಾರಿಗಳ ಕಚೇರಿ, ಪ್ರಾಥಮಿಕ ಆರೋಗ್ಯ ಕೇಂದ್ರ ಹುಲಕೋಟಿ ಹಾಗೂ ವಲಯ ಅರಣ್ಯಾಧಿಕಾರಿಗಳ ಕಛೇರಿ, ಮೃಗಾಲಯ ಇವರ ಸಂಯುಕ್ತ ಆಶ್ರಯದಲ್ಲಿ ಇತ್ತೀಚೆಗೆ "ವಿಶ್ವ ರೇಬಿಸ್ ದಿನ" ಹಾಗೂ "ವಿಶ್ವ ಹೃದಯ ದಿನ" ಗದಗ ಮೃಗಾಲಯದ ಆವರಣದಲ್ಲಿ ಆಚರಿಸಲಾಯಿತು.
ಫಿಜಿಶೀಯನ್ ಡಾ. ಸುನೀಲ ಹಬೀಬ ಅವರು ಮಾತನಾಡಿ "ವಿಶ್ವ ಹೃದಯ ದಿನ"ವನ್ನು ಪರಿಣಾಮಕಾರಿಯಾಗಿ ಜನರಲ್ಲಿ ಜಾಗೃತಿಯನ್ನು ಮೂಡಿಸುವುದು ನಮ್ಮೆಲ್ಲರ ಮುಖ್ಯ ಕರ್ತವ್ಯವಾಗಿದೆ. ಆಧುನಿಕ ಜೀವನ ಶೈಲಿ, ಧೂಮಪಾನ, ಮಧುಮೇಹ, ಅಧಿಕ ರಕ್ತದೊತ್ತಡ, ಬೊಜ್ಜು ಮತ್ತು ಆರೋಗ್ಯದ ಬಗ್ಗೆ ನಿಸ್ಕಾಳಜಿಯಿಂದ ಹೃದಯಕ್ಕೆ ಸಂಬಂಧಿಸಿದ ಸಮಸ್ಯೆಗಳು ಹೆಚ್ಚಾಗಿ ಕಾಣಿಸಿಕೊಳ್ಳುತ್ತಿರುವುದು ಎಚ್ಚರಿಕೆಯ ಗಂಟೆಯಾಗಿದೆ. ಇತ್ತೀಚಿನ ದಿನಗಳಲ್ಲಿ ಹೃದ್ರೋಗದ ಪ್ರಕರಣಗಳು ಹೆಚ್ಚಾಗುತ್ತಿದ್ದು, ಯುವ ಜನರೆ ಹೆಚ್ಚಿನ ಸಂಖ್ಯೆಯಲ್ಲಿ ಹಠಾತ್ತಾಗಿ ಹೃದಯಾಘಾತ, ಹೃದಯಸ್ತಂಭನಕ್ಕೀಡಾಗಿ ಜೀವ ಕಳೆದುಕೊಳ್ಳುತ್ತಿದ್ದಾರೆ ಎಂದು ವಿವರಿಸಿದರು.
ಜಿಲ್ಲಾ ಎಪಿಡೆಮಿಯೋಲಾಜಿಸ್ಟ್ ಡಾ.ಪ್ರವೀಣ ನಿಡಗುಂದಿ ಮಾತನಾಡಿ ರೇಬಿಸ್ ಒಂದು ವೈರಾಣುವಿನಿಂದ ಹರಡುವ ಮಾರಕ ಖಾಯಿಲೆ ಇದ್ದು, ಇದರ ತಡೆಗಟ್ಟುವಿಕೆ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಈ ರೋಗವನ್ನು ಸೋಲಿಸುವಲ್ಲಿ ಪ್ರಗತಿಯನ್ನು ಸಾಧಿಸಲು ಈ ದಿನವನ್ನು ವಾರ್ಷಿಕವಾಗಿ ಆಚರಿಸಲಾಗುತ್ತದೆ ಎಂದರು.
ರೇಬಿಸ್ ಲಸಿಕೆಯನ್ನು ಅಭಿವೃದ್ಧಿಪಡಿಸಿದ ಸೂಕ್ಷ್ಮ ಜೀವ ಶಾಸ್ತ್ರಜ್ಞ ಲೂಯಿಸ್ ಅವರ ಮರಣದ ವಾರ್ಷಿಕೋತ್ಸವವನ್ನು ವಿಶ್ವ ರೇಬಿಸ್ ದಿನಾಚರಣೆಯನ್ನಾಗಿ ಆಚರಿಸಲಾಗುತ್ತಿದೆ. ಪ್ರತಿ ವರ್ಷದಂತೆ




ಈ ವರ್ಷದಲ್ಲಿ "ಒಗ್ಗಟ್ಟಿನ ಹೆಜ್ಜೆ : ರೇಬಿಸ್ ಮುಕ್ತ ಸಮಾಜದತ್ತ" ಎಂಬ ಘೋಷವಾಕ್ಯದೊಂದಿಗೆ ವಿಶ್ವ ರೇಬಿಸ್ ದಿನಾಚರಣೆಯನ್ನು ಆಚರಿಸುತ್ತಿದ್ದೇವೆ. ಇದೊಂದು 100% ಮಾರಕ ರೋಗವಾಗಿದ್ದು, 100% ಇದನ್ನು ತಡೆಗಟ್ಟಬಹುದಾಗಿದೆ. ಇತ್ತೀಚಿನ ಅಧ್ಯಯನದ ಪ್ರಕಾರ ವರ್ಷಕ್ಕೆ ಸುಮಾರು 6000 ಸಾವುಗಳು ಭಾರತದಲ್ಲಿ ರೇಬಿಸ್‌ನಿಂದ ಆಗುತ್ತಿವೆ. ಕಾರಣ ರೇಬಿಸ್ ಲಸಿಕೆಯ ಬಗ್ಗೆ ಭಯ ಬಿಟ್ಟು ಎಲ್ಲರೂ ಲಸಿಕೆಯನ್ನು ಹಾಕಿಸಿಕೊಳ್ಳಬಹುದು ಎಂದು ತಿಳಿಸಿದರು.
ನಾಯಿ, ಬೆಕ್ಕು ಇತರೇ ಪ್ರಾಣಿಗಳು ಕಚ್ಚಿದಾಗ ನಿರ್ಲಕ್ಷವಹಿಸದೆ ತಕ್ಷಣವೇ ನೀರು ಕುಡಿಯದೆ 15 ನಿಮಿಷಗಳವರೆಗೆ ಯಾವುದಾದರೂ ಸಾಬೂನನ್ನು ಉಪಯೋಗಿಸಿ ಚೆನ್ನಾಗಿ ತೊಳೆದು ನಂತರ ನಂಜು ನಿರೋಧಕ ದ್ರಾವಣ ಲೇಪಿಸಿ ಹತ್ತಿರದ ಸರಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಳ್ಳಬೇಕೆಂದು ಹೇಳಿದರು. ಸಾಮಾನ್ಯವಾಗಿ ರೇಬಿಸ್ ಸೋಂಕು ಹೊಂದಿದ ಪ್ರಾಣಿಗಳಲ್ಲಿ ನಾಯಿಗಳಿಂದ 97% ರಷ್ಟು, ಬೆಕ್ಕುಗಳಿಂದ 2% ಹಾಗೂ ಇತರೇ ಪ್ರಾಣಿಗಳಿಂದ 1% ರಷ್ಟು ರೋಗ ಹರಡುವ ಸಾಧ್ಯತೆಯಿದೆ. ಇವುಗಳ ಕಡಿತದಿಂದ, ಪರಚುವಿಕೆಯಿಂದ, ತೆರೆದ ಚರ್ಮದ ಮೇಲೆ ನೆಕ್ಕುವಿಕೆಯಿಂದ, ಜೊಲ್ಲಿನ ಸಂಪರ್ಕದಿಂದ ರೋಗ ಹರಡುವ ಸಾಧ್ಯತೆ ಇದ್ದು, ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಉಚಿತವಾಗಿ ಲಸಿಕೆಗಳು ಲಭ್ಯವಿರುವಂತೆ ಕ್ರಮ ವಹಿಸಲಾಗಿದೆ ಎಂದು ತಿಳಿಸಿದರು.
ಗಾಯಕ್ಕೆ ಅರಿಶಿನ, ಎಣ್ಣೆ, ಸುಣ್ಣ, ಕಾಫಿಪುಡಿ ಹಚ್ಚುವುದು, ನಾಟಿ ಔಷಧ ತೆಗೆದುಕೊಳ್ಳುವುದು, ಗಾಯ ಚಿಕ್ಕದು ಎಂದು ಲಸಿಕೆಯನ್ನು ತೆಗೆದುಕೊಳ್ಳದೇ ಇರುವುದು ಮಾಡಬೇಡಿ ಎಂದು ತಿಳಿಸಿದರು.
ಜಿಲ್ಲಾ ಕಾರ್ಯಕ್ರಮ ಸಂಯೋಜಕರಾದ ಡಾ.ರವಿ ಕಡಗಾವಿ ಮಾತನಾಡಿ ಈ ವರ್ಷದ ಘೋಷವಾಕ್ಯ "ಒಂದು ಬಡಿತವನ್ನು ಕೂಡ ತಪ್ಪಿಸಿಕೊಳ್ಳಬೇಡಿ" ಎಂಬುದರ ಬಗ್ಗೆ ಸವಿಸ್ತಾರವಾಗಿ ವಿವರಿಸಿದರು. ಹೃದ್ರೋಗಳಿಗೆ ಉಂಟಾಗುತ್ತಿರುವ ಜೀವ ಹಾನಿ ಪ್ರಮಾಣವನ್ನು ತಗ್ಗಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರವು "ಪುನೀತ್‌ರಾಜ್‌ಕುಮಾರ್ ಹೃದಯ ಜ್ಯೋತಿ" ಮುಂತಾದ ಕಾರ್ಯಕ್ರಮಗಳನ್ನು ಜಾರಿಗೆ ತಂದಿದೆ ಎಂದು ತಿಳಿಸಿದರು.
ಮೃಗಾಲಯದ ಪಶು ವೈದ್ಯಾಧಿಕಾರಿ ಡಾ. ಪವಿತ್ರಾ ರೇವಡಿ ಪ್ರಾಸ್ತಾವಿಕ ನುಡಿ ಮಾತನಾಡಿ ಇಂದಿನ ಆರೋಗ್ಯ ತಪಾಸಣೆಯ ಶಿಬಿರದ ಉದ್ದೇಶ ಹಾಗೂ ರೇಬಿಸ್ ಲಸಿಕಾ ಕರಣದ ಮಹತ್ವವನ್ನು ತಿಳಿಸಿದರು.
ಕಾರ್ಯಕ್ರಮದ ಅಧ್ಯಕ್ಷರಾದ ಉಪ ವಲಯ ಅರಣ್ಯಾಧಿಕಾರಿ ಪವನ ತಕ್ಕೇದ, ಮಾತನಾಡಿ ನಮ್ಮ ಹೃದಯದ ಆರೋಗ್ಯವನ್ನು ಸಧೃಡವಾಗಿಟ್ಟುಕೊಳ್ಳಲು ಪ್ರತಿದಿನ ವ್ಯಾಯಾಮ, ಯೋಗಾಸನ, ಪೌಷ್ಠಿಕ ಆಹಾರ ಹಾಗೂ ಉತ್ತಮ ಆರೋಗ್ಯಕ್ಕಾಗಿ ಕನಿಷ್ಠ 7 ರಿಂದ 8 ಗಂಟೆಯವರೆಗೆ ಆರೋಗ್ಯಕರ ನಿದ್ರೆ ಅವಶ್ಯಕವಾಗಿರುತ್ತದೆಂದು ತಿಳಿಸಿದರು. ಕಾರ್ಯಕ್ರಮದ ನಂತರ ಗದಗ ಮೃಗಾಲಯದ ಎಲ್ಲ ಅಧಿಕಾರಿಗಳಿಗೆ ಹಾಗೂ ಸಿಬ್ಬಂದಿಗಳಿಗೆ ರಕ್ತದೊತ್ತಡ, ಮಧುಮೇಹ, ಈಸಿಜಿಪರೀಕ್ಷೆ, ನೇತ್ರಪರೀಕ್ಷೆ, ಕಫಪರೀಕ್ಷೆ, ಲೆಪ್ಟೋಸ್ಪೈರೋಸಿಸ್, ಬ್ರುಸ್ಸೆಲಾ ಪರೀಕ್ಷೆ ಹಾಗೂ ರೇಬಿಸ್ ಲಸಿಕಾಕರಣವನ್ನು ಆಯೋಜಿಸಲಾಗಿತ್ತು.
ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕು.ಕ.ಇಲಾಖೆಯ ಅಧಿಕಾರಿಗಳು, ಜಿಲ್ಲಾ ಸಮೀಕ್ಷಣಾ ಘಟಕದ ಅಧಿಕಾರಿಗಳು, ನೇತ್ರಾಧಿಕಾರಿಗಳು, ಕ್ಷಯರೋಗ ನಿಯಂತ್ರಣಾಧಿಕಾರಿಗಳ ಕಛೇರಿಯ ಅಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ ಹುಲಕೋಟಿ ಅಧಿಕಾರಿಗಳು/ಸಿಬ್ಬಂದಿಗಳು ಹಾಗೂ ಗದಗ ಮೃಗಾಲಯದ ಅಧಿಕಾರಿಗಳು/ಸಿಬ್ಬಂದಿಗಳು ಹಾಜರಿದ್ದರು. ನಿಖೀಲ ಕಾರ್ಯಕ್ರಮ ನಿರೂಪಿಸಿದರು ಹಾಗೂ ಉಮೇಶ ವಂದಿಸಿದರು.

# ಕೊಪ್ಪಳ ಜಿಲ್ಲೆಯಲ್ಲಿ ಕೇಂದ್ರ ಬರ ಅಧ್ಯಯನ ತಂಡದಿಂದ ಬೆಳೆ ಹಾನಿ ಪರಿಶೀಲನೆ

**ಸತ್ಯಮಿಥ್ಯ ಸುದ್ದಿಮೂಲ ಕೊಪ್ಪಳ :**
ರಾಜ್ಯದಲ್ಲಿ ತಲೆದೋರಿರುವ ತೀವ್ರ ಖಾರಿಫ್ ಬರ ಪರಿಸ್ಥಿತಿಯ ಅಧ್ಯಯನಕ್ಕಾಗಿ ಕೇಂದ್ರ ಸರ್ಕಾರದ ಉನ್ನತ ಮಟ್ಟದ ಅಧಿಕಾರಿಗಳ ತಂಡ (ಐಎಂಸಿಟಿ) ಅಕ್ಟೋಬರ್ 05ರಂದು ಕೊಪ್ಪಳ ಜಿಲ್ಲೆಗೆ ಭೇಟಿ ನೀಡಿ, ಬೆಳೆ ಹಾನಿಯನ್ನು ವಿಸ್ತೃತವಾಗಿ ಪರಿಶೀಲಿಸಿತು.

ಕೇಂದ್ರ ಸರ್ಕಾರದ ನಿರ್ದೇಶಕರಾದ ಡಾ. ಮನ್ ಸಿಂಗ್ ಅವರ ನೇತೃತ್ವದ, ಅಧೀನ ಕಾರ್ಯದರ್ಶಿಗಳಾದ ಪಾರ್ಥ ಪಾಲ್ ಹಾಗೂ ರಾಕೇಶ್ ಕುಮಾರ್ ಅವರನ್ನೊಳಗೊಂಡ ಅಧಿಕಾರಿಗಳ ತಂಡವು ಜಿಲ್ಲೆಯ ವಿವಿಧ ಬರಪೀಡಿತ ಪ್ರದೇಶಗಳಿಗೆ ತೆರಳಿ ಪರಿಶೀಲನೆ ನಡೆಸಿತು.

ತಂಡವು ಜಿಲ್ಲೆಯ ಕನಕಗಿರಿ ತಾಲೂಕಿನ ಹುಲಿಹೈದರ್ ಹೋಬಳಿಯ ಹನುಮನಾಳ ಗ್ರಾಮಕ್ಕೆ ಭೇಟಿ ನೀಡಿ, ಮಳೆಯಿಲ್ಲದೆ ಹಾನಿಗೊಳಗಾದ ಬೆಳೆಗಳನ್ನು ಖುದ್ದು ವೀಕ್ಷಿಸಿತು. ಹನುಮನಾಳ ಗ್ರಾಮದ ಬಸವರಾಜ ತಂದೆ ಲಿಂಗನಗೌಡ ಅವರ ಹೊಲದಲ್ಲಿ ಹಾನಿಗೊಳಗಾದ ತೊಗರಿ ಬೆಳೆ ಮತ್ತು ರೈತ ಮೂಖಪ್ಪ ತಂದೆ ಕರಿಯಪ್ಪ ಅವರ ಜಮೀನಿನಲ್ಲಿ ನಷ್ಟವಾದ ಸಜ್ಜೆ ಬೆಳೆಯನ್ನು ಪರಿಶೀಲಿಸಿದ ಕೇಂದ್ರ ಬರ ಅಧ್ಯಯನ ತಂಡದ ಅಧಿಕಾರಿಗಳು, ಮಳೆ ಕೊರತೆ ಮತ್ತು ಇಳುವರಿ ಕುಸಿತದ ಬಗ್ಗೆ ರೈತರಿಂದ ನೇರವಾಗಿ ಮಾಹಿತಿ ಪಡೆದುಕೊಂಡರು.

ಇದೇ ವೇಳೆ ಕೊಪ್ಪಳ ಜಿಲ್ಲಾಧಿಕಾರಿಗಳಾದ ಡಾ. ಸುರೇಶ್ ಬಿ. ಇಟ್ನಾಳ ಅವರು ಮಾತನಾಡಿ, ರೈತರು ಹೇಳಿದ ಪ್ರತಿಯೊಂದು ಸಮಸ್ಯೆ ಮತ್ತು ಬೇಡಿಕೆಗಳನ್ನು ಕನ್ನಡದಿಂದ ಇಂಗ್ಲಿಷ್ ಭಾಷೆಗೆ ಅನುವಾದಿಸಿ, ಕೇಂದ್ರ ಬರ ಅಧ್ಯಯನ ತಂಡಕ್ಕೆ ತಿಳಿಸಿಕೊಟ್ಟರು.

ಸಂಬಂಧಪಟ್ಟ ಅಧಿಕಾರಿಗಳು ಮಳೆ ಕೊರತೆ, ಬೆಳೆ ಹಾನಿಯ ಪ್ರಮಾಣ ಮತ್ತು ರೈತರು ಎದುರಿಸುತ್ತಿರುವ ಸಂಕಷ್ಟಗಳ ಕುರಿತು ಕೇಂದ್ರ ಬರ ಅಧ್ಯಯನ ತಂಡಕ್ಕೆ ವಾಸ್ತವ ಸ್ಥಿತಿ ಮನವರಿಕೆ ಮಾಡಿದರು.

**ಕೇಂದ್ರ ಬರ ಅಧ್ಯಯನ ತಂಡದ ಮುಂದೆ ರೈತರ ಅಳಲು:** ಬರ ಪರಿಸ್ಥಿತಿಯ ನೈಜ ಸ್ಥಿತಿಗತಿ ಪರಿಶೀಲನೆಗೆ ಆಗಮಿಸಿದ್ದ ಕೇಂದ್ರ ಬರ ಅಧ್ಯಯನ ತಂಡದ ಮುಂದೆ ರೈತರು ತಮ್ಮ ಸಂಕಷ್ಟಗಳನ್ನು ತೋಡಿಕೊಂಡರು. ಮಳೆಯಿಲ್ಲದೆ ಬೆಳೆಗಳು ಸಂಪೂರ್ಣ ನಾಶವಾಗಿದ್ದು, ತೀವ್ರ ಆರ್ಥಿಕ ಸಂಕಷ್ಟ ಎದುರಾಗಿದೆ ಎಂದು ಅಧಿಕಾರಿಗಳ ಎದುರು ರೈತರು ತಮ್ಮ ಅಳಲು ವ್ಯಕ್ತಪಡಿಸಿದರು.

ಕಳೆದ ಹಲವು ತಿಂಗಳುಗಳಿಂದ ಮಳೆಯಿಲ್ಲದೆ ತೊಗರಿ, ಹತ್ತಿ, ಭತ್ತ, ಜೋಳ ಮುಂತಾದ ಬೆಳೆಗಳು ಒಣಗಿ ಹೋಗಿವೆ. ಒಂದು ಎಕರೆಗೆ ಕನಿಷ್ಟ 40 ರಿಂದ 50 ಸಾವಿರ ರೂ.ಗಳು ಖರ್ಚು ಆಗಿವೆ. ಬೋರ್‌ವೆಲ್‌ಗಳಲ್ಲಿ ನೀರಿನ ಪ್ರಮಾಣ ಗಣನೀಯವಾಗಿ ಕುಸಿದಿದ್ದು, ಕೃಷಿಗೆ ಮಾತ್ರವಲ್ಲದೆ ಕುಡಿಯುವ ನೀರಿಗೂ ಸಮಸ್ಯೆ ಎದುರಾಗುತ್ತಿದೆ. ಜಾನುವಾರುಗಳಿಗೆ ಮೇವು ಮತ್ತು ನೀರಿನ ಕೊರತೆ ಉಂಟಾಗುತ್ತಿರುವುದರಿಂದ ತಕ್ಷಣವೇ ಗ್ರಾಮಗಳಲ್ಲಿ ಗೋಶಾಲೆಗಳನ್ನು ತೆರೆಯಬೇಕು ಮತ್ತು ಮೇವು ಬ್ಯಾಂಕ್ ಸ್ಥಾಪನೆ ಮಾಡಬೇಕು ಎಂದು ರೈತರು ಮನವಿ ಮಾಡಿದರು. ಸಂಕಷ್ಟದಲ್ಲಿರುವ ಅನ್ನದಾತರಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರವು ತ್ವರಿತವಾಗಿ ಸ್ಪಂದಿಸಬೇಕು. ಪ್ರತಿ ಎಕರೆಗೆ ಕನಿಷ್ಠ ರೂ. 50,000 ಪರಿಹಾರ ಒದಗಿಸಬೇಕು ಹಾಗೂ ರೈತರ ಎಲ್ಲಾ ಕೃಷಿ ಸಾಲಗಳನ್ನು ಸಂಪೂರ್ಣವಾಗಿ ಮನ್ನಾ ಮಾಡಬೇಕು ಎಂದು ರೈತರು ಒತ್ತಾಯಿಸಿದರು.




ಬೆಳೆ ನಷ್ಟದಿಂದ ರೈತರು ಕಂಗಾಲಾಗಿದ್ದು, ಕೆಲವೆಡೆ ರೈತರು ಆತ್ಮಹತ್ಯೆಗೆ ಶರಣಾಗುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಬ್ಯಾಂಕುಗಳು ಮತ್ತು ಖಾಸಗಿ ಲೇವಾದೇವಿದಾರರು ಸಾಲ ವಸೂಲಾತಿಗೆ ಕಿರುಕುಳ ನೀಡಬಾರದು ಎಂದು ಅನ್ನದಾತರು ವಿನಂತಿಸಿದರು.

ವಿ.ಬಿ. ಜಿ. ರಾಮ್ ಜಿ ಯೋಜನೆಯಡಿ ಕೆಲಸ ಮಾಡಿದ ಕೂಲಿ ಹಣವನ್ನು ಸಕಾಲಕ್ಕೆ ಪಾವತಿ ಮಾಡಬೇಕು ಎಂದು ರೈತರು ಕೇಂದ್ರ ಬರ ಅಧ್ಯಯನ ತಂಡದ ಮುಂದೆ ತಮ್ಮ ಬೇಡಿಕೆಗಳನ್ನು ಸಲ್ಲಿಸಿದರು.

ರೈತರ ಅಹವಾಲುಗಳನ್ನು ಆಲಿಸಿದ ಕೇಂದ್ರ ತಂಡದ ಅಧಿಕಾರಿಗಳು, ಪರಿಸ್ಥಿತಿಯ ಸಮಗ್ರ ವರದಿಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಿ ಅಗತ್ಯ ನೆರವು ದೊರಕಿಸಿಕೊಡಲು ಪ್ರಯತ್ನಿಸುವುದಾಗಿ ಭರವಸೆ ನೀಡಿದರು.

ಇದೇ ವೇಳೆ ಕೊಪ್ಪಳ ಜಿಲ್ಲಾಧಿಕಾರಿಗಳಾದ ಡಾ. ಸುರೇಶ್ ಬಿ. ಇಟ್ನಾಳ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿ, ಜಿಲ್ಲೆಯ 7 ತಾಲೂಕುಗಳಲ್ಲಿ ಮಳೆಯ ಕೊರತೆಯಿಂದ ಉಂಟಾಗಿರುವ ಬರ ಪರಿಸ್ಥಿತಿ, ಬೆಳೆ ಹಾನಿ, ಕುಡಿಯುವ ನೀರು, ಉದ್ಯೋಗ ಹಾಗೂ ಕಾಮಗಾರಿಗಳ ಸ್ಥಿತಿಗತಿಗಳ ಬಗ್ಗೆ ಕೇಂದ್ರ ಬರ ಅಧ್ಯಯನ ತಂಡಕ್ಕೆ ಸಮಗ್ರವಾಗಿ ವಿವರಿಸಲಾಗಿದೆ. ಜಿಲ್ಲೆಯಲ್ಲಿ ಸುಮಾರು 3,02,000 ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದೆ. ಎನ್‌ಡಿಆರ್‌ಎಫ್ ನಿಯಮಾವಳಿಗಳ ಅನ್ವಯ ಜಿಲ್ಲೆಗೆ ಇನ್‌ಪುಟ್ ಸಬ್ಸಿಡಿ (ಬೆಳೆ ನಷ್ಟ ಪರಿಹಾರ) ರೂಪದಲ್ಲಿ ಅಗತ್ಯವಿರುವ ಅನುದಾನ ಮಾಹಿತಿ ನೀಡಲಾಗಿದೆ. ಕೇಂದ್ರ ತಂಡವು ಇನ್ನೂ ಕೆಲವು ಗ್ರಾಮಗಳನ್ನು ವೀಕ್ಷಿಸಿದ ನಂತರ, ರಾಜ್ಯ ಮಟ್ಟದಲ್ಲಿ ಚರ್ಚೆ ನಡೆಸಿ ಅಂತಿಮವಾಗಿ ಕೇಂದ್ರ ಸರ್ಕಾರಕ್ಕೆ ತನ್ನ ಸಮಗ್ರ ವರದಿಯನ್ನು ಸಲ್ಲಿಸಲಿದೆ ಎಂದರು.

**ಜಾನುವಾರುಗಳಿಗೆ ಮೇವಿನ ನಿರ್ವಹಣೆ:** ಜಿಲ್ಲೆಯಲ್ಲಿ ಸುಮಾರು 12.70 ಲಕ್ಷ ಕುರಿ–ಮೇಕೆಗಳು ಹಾಗೂ 2.39 ಲಕ್ಷ ದನಕರುಗಳಿದ್ದು, ಸದ್ಯಕ್ಕೆ ಲಭ್ಯವಿರುವ ಮೇವಿನ ಪ್ರಮಾಣವನ್ನು ವಿವರಿಸಲಾಗಿದೆ. ಮುನ್ನೆಚ್ಚರಿಕೆಯಾಗಿ ಗೋಶಾಲೆ ತೆರೆಯುವುದು, ಮೇವಿನ ಬ್ಯಾಂಕ್ ಸ್ಥಾಪಿಸುವುದು ಹಾಗೂ ಮೇವಿನ ಮಿನಿ ಕಿಟ್‌ಗಳ ವಿತರಣೆಗೆ ಕ್ರಮ ಕೈಗೊಳ್ಳಲಾಗಿದೆ. ಈಗಾಗಲೇ 15,838 ಮೇವಿನ ಮಿನಿ ಕಿಟ್‌ಗಳು ಮಂಜೂರಾಗಿದ್ದು, ಅವುಗಳ ಪೂರೈಕೆ ಆರಂಭವಾಗಿದೆ. ಇದರಿಂದ ರೈತರಿಗೆ ಮೇವಿನ ಕೊರತೆ ಎದುರಾಗದಂತೆ ಕ್ರಮವಹಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಹನುಮನಾಳದಿಂದ ಮುಂದೆ ಸಾಗಿದ ತಂಡವು, ಕನಕಗಿರಿ ಹೋಬಳಿಯ ತಿಪ್ಪನಾಳ ಗ್ರಾಮಕ್ಕೆ ಭೇಟಿ ನೀಡಿ ರೈತ ಯಮನೂರಪ್ಪ ಅವರ ಕೃಷಿ ಭೂಮಿಯಲ್ಲಿ ಒಣಗುತ್ತಿರುವ ತೊಗರಿ ಬೆಳೆಯನ್ನು ಖುದ್ದು ಪರಿಶೀಲಿಸಿತು. ಬಳಿಕ ಸುಳೇಕಲ್ ಗ್ರಾಮದ ರೈತರೋರ್ವರ ಹೊಲದಲ್ಲಿನ ಕೃಷಿ ಹೊಂಡಕ್ಕೆ ಭೇಟಿ ಕೊಟ್ಟರು. ರೈತ ಸಂಗಪ್ಪ ತಂದೆ ನೂತನ ಶೆಟ್ಟಿ ಅವರ ಹೊಲದಲ್ಲಿ ಮಳೆಯ ಕೊರತೆಯಿಂದ ಹಾನಿಗೊಳಗಾದ ಸೂರ್ಯಕಾಂತಿ ಬೆಳೆ ಮತ್ತು ರೈತ ಸಣ್ಣ ಕಾಶಿಂಸಾಬ ತಂದೆ ಮರ್ದಾನಸಾಬ ಅವರ ಜಮೀನಲ್ಲಿ ನಷ್ಟವಾದ ಮೆಕ್ಕೆಜೋಳ ಮತ್ತು ಅಕ್ಕಪಕ್ಕದ ಇತರೆ ಬೆಳೆಯನ್ನು ಸಹ ವೀಕ್ಷಣೆ ನಡೆಸಿತು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಸಾಹಿಲ್ ಬಾಗ್ಲಾ, ಅಪರ ಜಿಲ್ಲಾಧಿಕಾರಿಗಳಾದ ಸಿದ್ಧರಾಮೇಶ್ವರ್, ಜಂಟಿ ಕೃಷಿ ನಿರ್ದೇಶಕರಾದ ಜಿ.ಡಿ. ಕೃಷ್ಣಮೂರ್ತಿ, ತೋಟಗಾರಿ–ಕೆ ಇಲಾಖೆ ಜಂಟಿ ನಿರ್ದೇಶಕರಾದ ಕೃಷ್ಣ ಉಕ್ಕುಂದ್, ಪಶುಪಾಲನಾ ಇಲಾಖೆಯ ಉಪನಿರ್ದೇಶಕರಾದ ಡಾ. ಪಿ.ಎಂ. ಮಲ್ಲಯ್ಯ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು, ತಹಶೀಲ್ದಾರರು ಹಾಗೂ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಉಪಸ್ಥಿತರಿದ್ದರು.

## ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಎಫ್.ಎ.ಕ್ಯೂ ಗುಣಮಟ್ಟದ ಸೂರ್ಯಕಾಂತಿ ಹುಟ್ಟುವಳಿ ಖರೀದಿಗೆ ಬೆಂಬಲ ಬೆಲೆ ನಿಗದಿ

**ಸತ್ಯಮಿಥ್ಯ ಸುದ್ದಿಮೂಲ ಗದಗ :**
2026–27 ನೇ ಸಾಲಿನ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಎಫ್.ಎ.ಕ್ಯೂ ಗುಣಮಟ್ಟದ ಸೂರ್ಯಕಾಂತಿ ಹುಟ್ಟುವಳಿ ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ತಿಳಿಸಿದರು.



ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ 2026–27 ನೇ ಸಾಲಿನ ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಸೂರ್ಯಕಾಂತಿ ಖರೀದಿಸುವ ಕುರಿತು ಜಿಲ್ಲಾ ಟಾಸ್ಕ್ ಫೋರ್ಸ ಸಮಿತಿಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ತೆರೆಯಲಾಗುವ ಸೂರ್ಯಕಾಂತಿ ಹುಟ್ಟುವಳಿ ಖರೀದಿ ಕೇಂದ್ರಗಳಲ್ಲಿ ಖರೀದಿಸಲಾಗುವ ಎಫ್. ಎ ಕ್ಯೂ ಗುಣಮಟ್ಟ ಪರಿಶೀಲನೆಗೆ ಗ್ರೇಡರ್‌ಗಳನ್ನು ನೇಮಕ ಮಾಡಬೇಕು ಮತ್ತು ಅವರಿಗೆ ಎಫ್‌ಎಕ್ಯೂ ಗ್ರೇಡಿಂಗ್ ತರಬೇತಿ ನೀಡಬೇಕು. ಜಿಲ್ಲೆಯ ಪ್ರತಿ ರೈತರಿಂದ ಪ್ರತಿ ಎಕರೆಗೆ 04 ಕ್ವಿಂಟಾಲ್ ಗರಿಷ್ಟ ಪ್ರಮಾಣ ಹಾಗೂ ಪ್ರತಿ ರೈತರಿಂದ ಗರಿಷ್ಟ 20 ಕ್ವಿಂಟಾಲ್ ಸೂರ್ಯಕಾಂತಿ ಖರೀದಿಸಬೇಕು. ಸರ್ಕಾರದ ಬೆಂಬಲ ಬೆಲೆಯಲ್ಲಿ ಸೂರ್ಯಕಾಂತಿ ಹುಟ್ಟುವಳಿ ಖರೀದಿಯ ಕುರಿತು ರೈತರಿಗೆ ತಿಳುವಳಿಕೆ ನೀಡಲು ವ್ಯಾಪಕ ಪ್ರಚಾರ ಕೈಗೊಳ್ಳಬೇಕು ಹಾಗೂ ಜಿಲ್ಲೆಯ ರೈತರು ಈ ಯೋಜನೆಯ ಲಾಭ ಪಡೆಯಲು ಅನುಕೂಲವಾಗುವಂತೆ ಕ್ರಮ ವಹಿಸಬೇಕೆಂದು ಜಿಲ್ಲಾಕಾರಿ ಸಿ.ಎನ್.ಶ್ರೀಧರ್ ಸೂಚಿಸಿದರು.

ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರಾದ ಸುಧಾ ಆರ್ ಬಂಡಿ ಅವರು ಮಾತನಾಡಿ ಎಫ್.ಎ.ಕ್ಯೂ ಗುಣಮಟ್ಟದ ಸೂರ್ಯಕಾಂತಿ ಹುಟ್ಟುವಳಿಗೆ ಪ್ರತಿ ಕ್ವಿಂಟಾಲ್‌ಗೆ 8343 ರೂ ಗಳಂತೆ ನಿಗದಿಪಡಿಸಲಾಗಿದೆ. ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ ಸರ್ಕಾರದ ಆದೇಶದನುಸಾರ ನ್ಯಾಫೆಡ್ ಸಂಸ್ಥೆ ಹಾಗೂ ಎನ್.ಸಿ.ಸಿ.ಎಫ್. ಸಂಸ್ಥೆಯನ್ನು ಕೇಂದ್ರದ ಖರೀದಿ ಏಜೆನ್ಸಿಯಾಗಿ ಹಾಗೂ ಕರ್ನಾಟಕ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳಿ ನಿಯಮಿತ ( ಕೆ ಓ ಎಫ್ ) ಬೆಂಗಳೂರು ಇವರನ್ನು ರಾಜ್ಯ ಮಟ್ಟದ ಖರೀದಿ ಏಜನ್ಸಿಯನ್ನಾಗಿ ನೇಮಿಸಿದ್ದು ಸರ್ಕಾರದ ಆದೇಶದ ದಿನಾಂಕದಿಂದ ರೈತರ ನೋಂದಣಿ ಕಾಲಾವಧಿಯನ್ನು 80 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 90 ದಿನಗಳವರೆಗೆ ನಿಗದಿಪಡಿಸಿದ್ದು, ನೋಂದಣಿ ಕಾರ್ಯದ ಜೊತೆಗೆ ಖರೀದಿ ಪ್ರಕ್ರಿಯೆಯನ್ನು ಸಹ ಪ್ರಾರಂಭಿಸಲು ಆದೇಶಿಸಿದೆ ಎಂದರು.

ಜಿಲ್ಲೆಯ 11 ಕಡೆಗಳಲ್ಲಿ ಖರೀದಿ ಕೇಂದ್ರಗಳನ್ನು ತೆರೆಯಲು ತೀರ್ಮಾನಿಸಲಾಯಿತು.

ಸಭೆಯಲ್ಲಿ ಕೃಷಿ ಇಲಾಖೆ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ, ತೋಟಗಾರಿಕೆ ಇಲಾಖೆ, ಸಹಕಾರಿ ಸಂಘಗಳ ಇಲಾಖೆ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು.

## ರೈತರ ಬೆವರಿಗೊಂದು ಸಂಘಟನೆಯ ಬಲ, ಸ್ವಾವಲಂಬನೆಗೆ ಎಫ್‌ಪಿಒ ದಾರಿ!

### ಸಹಕಾರದ ಹೆಜ್ಜೆಯೊಂದಿಗೆ ರೈತ ಸಮೃದ್ಧಿ ಕಂಪನಿಗೆ 3 ವರ್ಷ; ಜಿ.ಬಿ. ಬೆಲ್ಲದ ಆಶಯ

**ಸತ್ಯಮಿಥ್ಯ ಸುದ್ದಿಮೂಲ ನರೇಗಲ್ಲ :**
ರೈತನ ಬೆವರಿನ ಹನಿಗೆ ನ್ಯಾಯಯುತ ಬೆಲೆ ಸಿಗಬೇಕು, ಕೃಷಿಯಿಂದಲೇ ಬದುಕು ಕಟ್ಟಿಕೊಳ್ಳುವ ರೈತ ಸ್ವಾವಲಂಬಿಯಾಗಬೇಕು ಎಂಬ ಆಶಯದೊಂದಿಗೆ ರೈತ ಉತ್ಪಾದಕರ ಸಂಸ್ಥೆಗಳು (ಎಫ್‌ಪಿಒ) ಮುನ್ನಡೆಯಬೇಕಿದೆ. ರೈತರ ಒಗ್ಗಟ್ಟು ಹಾಗೂ ಸಹಕಾರವೇ ಇಂತಹ ಸಂಸ್ಥೆಗಳ ನಿಜವಾದ ಶಕ್ತಿ ಎಂದು ಗುರುಪಾದಪ್ಪ (ಜಿ.ಬಿ.) ಬೆಲ್ಲದ ಹೇಳಿದರು.




ಪಟ್ಟಣದಲ್ಲಿ ನಡೆದ ನರೇಗಲ್ಲ ರೈತ ಸಮೃದ್ಧಿ ತೆ–ೂಟಗಾರಿಕಾ ಉತ್ಪಾದಕರ ಕಂಪನಿಯ 3ನೇ ವಾರ್ಷಿಕ ಮಹಾಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು.

ಸುಮಾರು 50 ವರ್ಷಗಳ ಹಿಂದೆ ರೈತಪರ ಚಿಂತನೆಯೊಂದಿಗೆ ಸೌಹಾರ್ದ ಸಹಕಾರಿ ಸಂಸ್ಥೆಗಳು ರಚನೆಯಾಗಿದ್ದವು. ಆದರೆ, ಅವು ನಿರೀಕ್ಷಿತ ರೀತಿಯಲ್ಲಿ ಮುನ್ನಡೆಯದೆ ಹಲವು ಸಂಸ್ಥೆಗಳು ವಿಫಲಗೊಂಡವು. ಇದೀಗ ರೈತರು ಸ್ವಾವಲಂಬಿಗಳಾಗಬೇಕು ಎಂಬ ಉದ್ದೇಶದಿಂದ ಕೇಂದ್ರ ಸರ್ಕಾರ ಎಫ್‌ಪಿಒಗಳಿಗೆ ಉತ್ತೇಜನ ನೀಡುವುದರ ಜತೆಗೆ ಆರ್ಥಿಕ ನೆರವು ಒದಗಿಸುತ್ತಿದೆ. ಇದರ ಸದುಪಯೋಗವನ್ನು ರೈತರು ಪಡೆದುಕೊಳ್ಳಬೇಕು ಎಂದರು.

ನರೇಗಲ್ಲ ರೈತ ಸಮೃದ್ಧಿ ತೋಟಗಾರಿಕಾ ಉತ್ಪಾದಕರ ಕಂಪನಿ ಮೂರು ವರ್ಷಗಳ ಅಲ್ಪ ಅವಧಿಯಲ್ಲೇ ರೈತಪರ ಚಿಂತನೆಯೊಂದಿಗೆ ಪ್ರಗತಿಯತ್ತ ಸಾಗುತ್ತಿರುವುದು ಹೆಮ್ಮೆಯ ಸಂಗತಿ. ಸಂಸ್ಥೆಯ ಪದಾಧಿಕಾರಿಗಳು ಸುತ್ತಮುತ್ತಲಿನ ರೈತರ ಅಭಿವೃದ್ಧಿಗಾಗಿ ನಿರಂತರವಾಗಿ ಶ್ರಮಿಸುತ್ತಿದ್ದಾರೆ. ರೈತರ ಉತ್ಪನ್ನಗಳಿಗೆ ಉತ್ತಮ ಮಾರುಕಟ್ಟೆ, ಸೂಕ್ತ ಮಾರ್ಗದರ್ಶನ ಹಾಗೂ ಅಗತ್ಯ ಸಹಕಾರ ದೊ–ರೆತಾಗ ಕೃಷಿ ಕ್ಷೇತ್ರ ಮತ್ತಷ್ಟು ಬಲಿಷ್ಠವಾಗಲು ಸಾಧ್ಯ ಎಂದು ಹೇಳಿದರು.

ರೈತರಿಗಾಗಿ ಆರಂಭಗೊಂಡಿರುವ ಸಂಸ್ಥೆಯ ಯಶಸ್ಸು ಕೇವಲ ಪದಾಧಿಕಾರಿಗಳಿಂದ ಸಾಧ್ಯವಲ್ಲ. ಸಂಸ್ಥೆಯ ಪ್ರತಿಯೊಬ್ಬ ಶೇರುದಾರ ರೈತನ ಸಹಭಾಗಿತ್ವವೇ ಅದರ ಬಲ. ಸಂಸ್ಥೆಯ ಸಾಧನೆ–ಬಾಧಕಗಳನ್ನು ಅರಿತು, ಸಲಹೆ–ಸಹಕಾರ ನೀಡಿದಾಗ ಮಾತ್ರ ಮುಂದಿನ ದಿನಗಳಲ್ಲಿ ಇನ್ನಷ್ಟು ದೊಡ್ಡ ಮಟ್ಟದ ಬೆಳವಣಿಗೆ ಸಾಧಿಸಲು ಸಾಧ್ಯ ಎಂದು ಬೆಲ್ಲದ ಹೇಳಿದರು.

**ರೈತರ ಸಹಕಾರವೇ ನಮ್ಮ ಬಂಡವಾಳ:** ನರೇಗಲ್ಲ ರೈತ ಸಮೃದ್ಧಿ ತೋಟಗಾರಿಕಾ ಉತ್ಪಾದಕರ ಕಂಪನಿ ಅಧ್ಯಕ್ಷ ಜಗದೀಶ ಸಂಕನಗೌಡ್ರ ಮಾತನಾಡಿ, ಶೇರುದಾರ ರೈತರ ಅಹವಾಲುಗಳನ್ನು ಆಲಿಸಿ, ಅವರ ಪ್ರಶ್ನೆಗಳಿಗೆ ಉತ್ತರಿಸುವುದು ಸಂಸ್ಥೆಯ ಜವಾಬ್ದಾರಿಯಾಗಿದೆ. ರೈತರ ಸಹಕಾರ ಮತ್ತು ಸಹಭಾಗಿತ್ವದೊಂದಿಗೆ ಸಂಸ್ಥೆ ಯಶಸ್ವಿಯಾಗಿ ಮುನ್ನಡೆಯುತ್ತಿದೆ ಎಂದರು.

“ರೈತರಬೇಕು–ಬೇಡಿಕೆಗಳನ್ನುಗಮನದಲ್ಲಿಟ್ಟುಕೊಂಡು ಮುಂದಿನ ಹೆಜ್ಜೆ ಇಡಲಾಗುವುದು. ರೈತರು ಸಂಸ್ಥೆಯನ್ನು ತಮ್ಮದೇ ಸಂಸ್ಥೆ ಎಂದು ಭಾವಿಸಿ ಕೈಜೋಡಿಸಿದರೆ, ಇನ್ನಷ್ಟು ಪ್ರಗತಿ ಸಾಧಿಸಲು ಸಾಧ್ಯ” ಎಂದು ವಿಶ್ವಾಸ ವ್ಯಕ್ತಪಡಿಸಿದರು.

ವೇದಿಕೆಯಲ್ಲಿ ಡಾ. ಆರ್.ಕೆ. ಗಚ್ಚಿನಮಠ, ಬಾಳಪ್ಪ ಸೋಮಗೊಂಡ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಬಸವರಾಜ ವಂಕಲಕುಂಟಿ, ಸಿದ್ದಪ್ಪ ರಾಗಿ, ಉಮೇಶಗೌಡ ಪಾಟೀಲ, ಶೇಖರಗೌಡ ಪಾಟೀಲ, ಶಿವಪ್ಪ ಗೋಡಿ, ಸುರೇಶ ಬಾಗಲಿ, ರಾಜು ವಂಕಲಕುಂಟಿ, ಶರಣಪ್ಪ ಹಕ್ಕಿ ಸೇರಿದಂತೆ ಹಲವಾರು ಶೇರುದಾರ ರೈತರು ಉಪಸ್ಥಿತರಿದ್ದರು.

ನಿರ್ದೇಶಕ ಮಂಡಳಿಯ ಚನಬಸಪ್ಪ ಕುಷ್ಟಗಿ ಸ್ವಾಗತಿಸಿದರು. ಈಶ್ವರ ಬೆಟಗೇರಿ ನಿರೂಪಿಸಿದರು. ರವಿ ಮ್ಯಾಗೇರಿ ವಂದಿಸಿದರು.

ರೈತರ ಬೆವರಿನಿಂದ ಬೆಳೆದ ಕೃಷಿಗೆ ಸಂಘಟನೆಯ ಬಲ ಸಿಕ್ಕಾಗ, ಸ್ವಾವಲಂಬನೆಯ ದಾರಿ ಮತ್ತಷ್ಟು ಸುಗಮವಾಗಲಿದೆ ಎಂಬ ಆಶಯ ಮಹಾಸಭೆಯಲ್ಲಿ ವ್ಯಕ್ತವಾಯಿತು.

## ಕೋಟೆನಾಡು ಉತ್ಸವಕ್ಕೆ ಸಕಲ ಸಿದ್ಧತೆ: ನಾಳೆ ಭುವನೇಶ್ವರಿ ಭಾವಚಿತ್ರದ ಮೆರವಣಿಗೆ

**ಸತ್ಯಮಿಥ್ಯ ಸುದ್ದಿಮೂಲ ಗಜೇಂದ್ರಗಡ:**
ಉತ್ತರ ಕರ್ನಾಟಕ ಶ್ಯಾಮಿಯಾನ ಸಪ್ಲಾಯರ್ಸ್, ಲೈಟಿಂಗ್, ಧ್ವನಿವರ್ಧಕ ಹಾಗೂ ಡೆಕೋರೇಷನ್ ಮಾಲೀಕರ ಕ್ಷೇಮಾಭಿವೃದ್ಧಿ ಸಂಘ ಹೊಸಪೇಟೆ–ವಿಜಯನಗರ ಜಿಲ್ಲೆ, ಗದಗ ಜಿಲ್ಲಾ ಶ್ಯಾಮಿಯಾನ ಸಪ್ಲಾಯರ್ಸ್ ಸಂಘ, ಗಜೇಂದ್ರಗಡ ತಾಲೂಕು ಶ್ಯಾಮಿಯಾನ ಸಪ್ಲಾಯರ್ಸ್ ಸಂಘ ಹಾಗೂ ರೋಣ ತಾಲೂಕು ಶ್ಯಾಮಿಯಾನ ಸಪ್ಲಾಯರ್ಸ್ ಸಂಘಗಳ ಸಹಯೋಗದಲ್ಲಿ 8ನೇ ವರ್ಷದ ವಾರ್ಷಿಕೋತ್ಸವ ಹಾಗೂ ಕೋಟೆನಾಡು ಉತ್ಸವ ಕಾರ್ಯಕ್ರಮಕ್ಕೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ.

ಉತ್ಸವದ ಅಂಗವಾಗಿ ಅ.7ರಂದು ಬುಧವಾರ ಬೆಳಗ್ಗೆ 9 ಗಂಟೆಗೆ ತಾಯಿ ಭುವನೇಶ್ವರಿಯ ಭಾವಚಿತ್ರದ ಭವ್ಯ ಮೆರವಣಿಗೆ ಹಮ್ಮಿಕೊಳ್ಳಲಾಗಿದೆ. ನಗರದ ಮೈಸೂರು ಮಠದಿಂದ ಮೆರವಣಿಗೆ ಆರಂಭವಾಗಲಿದ್ದು, ಬಸವೇಶ್ವರ ವೃತ್ತ, ದುರ್ಗಾ ವೃತ್ತ, ಅಂಬೇಡ್ಕರ್ ವೃತ್ತ, ಶಿವಾಜಿ ವೃತ್ತ ಹಾಗೂ ಕಾಲಕಾಲೇಶ್ವರ ವೃತ್ತದ ಮಾರ್ಗವಾಗಿ ಸಾಗಲಿದೆ.

ಬಳಿಕ ಮೆರವಣಿಗೆ ಜಿ.ಕೆ. ಬಂಡಿ ಗಾರ್ಡನ್ ತಲುಪಲಿದ್ದು, ಅಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಕಾರ್ಯಕ್ರಮದಲ್ಲಿ ಸಂಘದ ಪದಾಧಿಕಾರಿಗಳು, ಸದಸ್ಯರು ಸೇರಿದಂತೆ ವಿವಿಧ ಗಣ್ಯರು ಪಾಲ್ಗೊಳ್ಳಲಿದ್ದಾರೆ.

ಕೋಟೆನಾಡು ಉತ್ಸವದ ಅಂಗವಾಗಿ ನಗರದ ಪ್ರಮುಖ ರಸ್ತೆಗಳು ಹಾಗೂ ಜಿ.ಕೆ. ಬಂಡಿ ಗಾರ್ಡನ್‌ನಲ್ಲಿ ಸಿದ್ಧತೆಗಳನ್ನು ಕೈಗೊಳ್ಳಲಾಗಿದ್ದು, ಉತ್ಸವದಲ್ಲಿ ಶ್ಯಾಮಿಯಾನ ಸಪ್ಲಾಯರ್ಸ್, ಲೈಟಿಂಗ್, ಧ್ವನಿವರ್ಧಕ ಹಾಗೂ ಡೆಕೋರೇಷನ್ ಕ್ಷೇತ್ರದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲಿದ್ದಾರೆ. ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸಂಘದ ಪದಾಧಿಕಾರಿಗಳು ಮನವಿ ಮಾಡಿದ್ದಾರೆ.



## 40,000 ರೂಪಾಯಿ ಲಂಚ ಪಡೆಯುತ್ತಿದ್ದ ಗ್ರಾಮ ಆಡಳಿತಾಧಿಕಾರಿ, ಸಹಾಯಕ ಲೋಕಾಯುಕ್ತ ಬಲೆಗೆ

**ಸತ್ಯಮಿಥ್ಯ ಸುದ್ದಿಮೂಲ ಕೊಪ್ಪಳ :**
ವಿಲ್ ಮೂಲಕ ಬಂದಿರುವ ಜಮೀನಿನ ಉತಾರ ಮಾಡಿಸಿಕೊಡಲು ರೂ. 40,000 ಲಂಚ ಸ್ವೀಕರಿಸುತ್ತಿದ್ದ ಸಂಗಾಪುರದ ಗ್ರಾಮ ಆಡಳಿತಾಧಿಕಾರಿ ಹಾಗೂ ಗ್ರಾಮ ಸಹಾಯಕ ಅಕ್ಟೋಬರ್ 06ರಂದು ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿದ್ದಾರೆ.

ಸಂಗಾಪುರದ ಗ್ರಾಮ ಆಡಳಿತಾಧಿಕಾರಿ ಸೋಮನಾಥ ಟಿ. ಹಾಗೂ ಗ್ರಾಮ ಸಹಾಯಕ ಹನುಮೇಶ ಬಂಡಿ ಆಂಜನೇಯ ಬಂಧಿತ ಆರೋಪಿಗಳಾಗಿದ್ದಾರೆ.

**ಘಟನೆಯ ವಿವರ:** ಗಂಗಾವತಿ ತಾಲೂಕಿನ ಅಂಜನಹಳ್ಳಿ ನಿವಾಸಿ ರಾಮು ತಂದೆ ವೆಂಕಟೇಶ ಎಂಬುವವರಿಗೆ ತಮ್ಮ ಸಣ್ಣಜ್ಜನಿಂದ ವಿಲ್ ಮೂಲಕ ಜಮೀನು ಬಂದಿತ್ತು. ಈ ಜಮೀನಿನ ದಾಖಲೆಗಳನ್ನು (ಉತಾರ) ತಮ್ಮ ಹೆಸರಿಗೆ ಮಾಡಿಸಿಕೊಡುವಂತೆ ಅವರು ಗಂಗಾವತಿ ತಹಶೀಲ್ದಾರ್ ಕಚೇರಿಗೆ ಅರ್ಜಿ ಸಲ್ಲಿಸಿದ್ದರು. ಆದರೆ, ಈ ಕೆಲಸ ಮಾಡಿಕೊಡಲು ಗ್ರಾಮ ಆಡಳಿತಾಧಿಕಾರಿ ಸೋಮನಾಥ ಟಿ. ಹಾಗೂ ಗ್ರಾಮ ಸಹಾಯಕ ಹನುಮೇಶ ರೂ. 40,000 ಲಂಚಕ್ಕೆ ಬೇಡಿಕೆ ಇಟ್ಟಿದ್ದರು. ಈ ಕುರಿತು ರಾಮು ಅವರು ಅಕ್ಟೋಬರ್ 5 ರಂದು ಕೊಪ್ಪಳದ ಲೋಕಾಯುಕ್ತ ಪೊಲೀಸ್ ಠಾಣೆಗೆ ತೆರಳಿ ದೂರು ದಾಖಲಿಸಿದ್ದರು.



ದೂರಿನ ಮೇರೆಗೆ ಕಾರ್ಯಾಚರಣೆ ನಡೆಸಿದ ಲೋಕಾಯುಕ್ತ ಅಧಿಕಾರಿಗಳು, ಮಂಗಳವಾರ (ಅಕ್ಟೋಬರ್ 6) ಮಧ್ಯಾಹ್ನ ಸುಮಾರು 12:40ರ ವೇಳೆಗೆ ಫಿರ್ಯಾದಿ ರಾಮು ಅವರಿಂದ ರೂ. 40,000 ಲಂಚದ ಹಣವನ್ನು ಪಡೆಯುತ್ತಿದ್ದಾಗ ಇಬ್ಬರೂ ಅಧಿಕಾರಿಗಳನ್ನು ರೆಡ್‌ಹ್ಯಾಂಡ್ ಆಗಿ ದಸ್ತಗಿರಿ ಮಾಡಿದ್ದಾರೆ. ಆರೋಪಿಗಳಿಂದ ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ. ರಾಯಚೂರು ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಸಿದ್ದರಾಜು ಸಿ. ಅವರ ಮಾರ್ಗದರ್ಶನದಲ್ಲಿ, ಲೋಕಾಯುಕ್ತ ಡಿವೈಎಸ್‌ಪಿ ವಿಜಯ ಬಿರಾದಾರ, ಪೊಲೀಸ್ ಇನ್ಸ್‌ಪೆಕ್ಟರ್‌ಗಳಾದ ಸುನೀಲ ಮೇಗಲಮನಿ, ಶೈಲಾ ಎಸ್. ಪ್ಯಾಟಿಶೆಟ್ಟರ್ ಹಾಗೂ ಸಿಬ್ಬಂದಿಗಳ ತಂಡ ಈ ಯಶಸ್ವಿ ಟ್ರ್ಯಾಪ್ ಕಾರ್ಯಾಚರಣೆಯನ್ನು ನಡೆಸಿದೆ ಎಂದು ಕೊಪ್ಪಳ ಲೋಕಾಯುಕ್ತ ಕಚೇರಿಯ ಪ್ರಕಟಣೆ ತಿಳಿಸಿದೆ.

ಸತ್ಯ ಮಿಥ್ಯ
ನಿಮ್ಮ ಪ್ರತಿಬಿಂಬ ಕನ್ನಡ ದಿನ ಪತ್ರಿಕೆ
SATY MITHI
Kannada Daily Morning

# ಕಣ್ಣಿಗೆ ಕಾಣುವುದೆಲ್ಲವನ್ನೂ ನಂಬಬೇಡಿ

## ಇಂದಿನ ಕಾಲದ ಕೆಲವು ವಂಚಕಿಯರ ಜಾಲದಿಂದ ಜಾಗರೂಕರಾಗಿರಿ




ಮನುಷ್ಯನ ಜೀವನದ ಅತ್ಯಂತ ಪವಿತ್ರವಾದ ಭಾವನೆಗಳಲ್ಲಿ 'ನಂಬಿಕೆ'ಗೆ ಅಗ್ರಸ್ಥಾನವಿದೆ. ಪ್ರೇಮವಾಗಲಿ, ಸ್ನೇಹವಾಗಲಿ ಅಥವಾ ಯಾವುದೇ ಸಂಬಂಧವಾಗಲಿ, ಅದರ ಅಡಿಪಾಯವೇ ಪರಸ್ಪರರ ಮೇಲಿನ ನಂಬಿಕೆ. ಆದರೆ, ಇಂದಿನ ಆಧುನಿಕ ಹಾಗೂ ಡಿಜಿಟಲ್ ಜಗತ್ತಿನಲ್ಲಿ ಈ ಪವಿತ್ರ ಪದದ ಅರ್ಥವೇ ಬದಲಾಗುತ್ತಿದೆ. ಮೈಮರೆತ ಮುಗ್ಧ ಯುವಕರ ಭಾವನೆಗಳೊಂದಿಗೆ ಆಟವಾಡಿ, ಅವರನ್ನು ಬೌದ್ಧಿಕವಾಗಿ ಹಾಗೂ ಆರ್ಥಿಕವಾಗಿ ನುಜ್ಜುಗುಜ್ಜು ಮಾಡುತ್ತಿರುವ ಕೆಲವರ ಕಪಟ ನಾಟಕಗಳು ಇಂದು ಹೆಚ್ಚುತ್ತಿವೆ. ಇಲ್ಲಿ ಇಡೀ ಸ್ತ್ರೀಕುಲವನ್ನು ದೂಷಿಸುವುದು ನಮ್ಮ ಉದ್ದೇಶವಲ್ಲ; ಬದಲಿಗೆ, ಸಮಾಜದ ಮುಖವಾಡದ ಮರೆಯಲ್ಲಿ ವಂಚನೆಯೇ ಕಸುಬಾಗಿಸಿಕೊಂಡಿರುವ ಕೆಲವರ ಅಸಲಿ ಮುಖವನ್ನು ಬಿಚ್ಚಿಟ್ಟು, ಯುವಕರಿಗೆ ಒಂದು ಕಣ್ಣು ತೆರೆಸುವ ಸತ್ಯದ ದಾರಿ.

**ಮೇಲ್ನೋಟದ ಹೊಳಪು ಮತ್ತು ವರ್ಚ್ಯುಯಲ್ ಮಾಯಾಲೋಕ:** ಹಿಂದಿನ ಕಾಲದಲ್ಲಿ ವ್ಯಕ್ತಿಯೊಬ್ಬರ ಪರಿಚಯವಾಗಲು, ಅವರ ನಡವಳಿಕೆ ಹಾಗೂ ಸಂಸ್ಕಾರವನ್ನು ಹತ್ತಿರದಿಂದ ತಿಳಿಯಲು ಸಾಕಷ್ಟು ಸಮಯ ಬೇಕಾಗುತ್ತಿತ್ತು. ಆದರೆ ಇಂದಿನ ಇನ್‌ಸ್ಟಾಗ್ರಾಮ್ ರೀಲ್ಸ್‌ಗಳು, ಸ್ನ್ಯಾಪ್‌ಚಾಟ್ ಫಿಲ್ಟರ್‌ಗಳು ಮತ್ತು ಡೇಟಿಂಗ್ ಆಪ್‌ಗಳ ಲೋಕದಲ್ಲಿ ಎಲ್ಲವೂ ಸೆಕೆಂಡುಗಳಲ್ಲಿ ನಡೆದುಹೋಗುತ್ತದೆ. ಇಲ್ಲಿ ಪ್ರೊಫೈಲ್‌ನಲ್ಲಿ ಕಾಣುವ ಅಂದಚೆಂದವೇ ಬೇರೆ, ನೈಜ ಬದುಕಿನ ಕಟು ಸತ್ಯವೇ ಬೇರೆ.

ಕೆಲವುಯುವತಿಯರುತಮ್ಮಬಾಹ್ಯಸೌಂದರ್ಯದಅಹಂಕಾರದಿಂದಅಥವಾಅತಿಮೃದುವಾದ ಸಿಹಿ ಮಾತುಗಳಿಂದ ಮುಗ್ಧ ಯುವಕರನ್ನು ಕೆಲವೇ ದಿನಗಳಲ್ಲಿ ತಮ್ಮ ಬಲೆಗೆ ಕೆಳಸಿಕೊಳ್ಳುತ್ತಾರೆ. ಯುವಕರು ತಾವು ನೋಡುವ ಕೃತಕ ಆಕರ್ಷಣೆಗೆ ಮರುಳಾಗಿ, ಆ ವ್ಯಕ್ತಿಯ ನೈಜ ಹಿನ್ನೆಲೆಯನ್ನು ತಿಳಿಯದೆಯೇ ತಮ್ಮ ಜೀವನದ ಸರ್ವಸ್ವವನ್ನೂ ಧಾರೆಯೆರೆಯಲು ಮುಂದಾಗುತ್ತಾರೆ. ಆದರೆ, ಕಷ್ಟದ ಕಾಲ ಬಂದಾಗ ಅಥವಾ ಜೇಬು ಖಾಲಿಯಾದಾಗ ಮಾತ್ರ ಆ ಕೃತಕ ಪ್ರೀತಿಯ ಮುಖವಾಡ ಕಳಚಿಬೀಳುತ್ತದೆ.

**ವಂಚನೆಯ ಬಲೆ:** ಯುವಕರು ಎಚ್ಚರದಿಂದಿರಬೇಕಾದ ಪ್ರಮುಖ ಮುಖಗಳು

ಸಮಾಜದಲ್ಲಿ ಕೆಲವರು ತಮ್ಮ ಲೌಕಿಕ ಸುಖಭೋಗಗಳಿಗಾಗಿ ಯಾವ ಮಟ್ಟಕ್ಕಾದರೂ ಇಳಿಯಬಲ್ಲರು ಎಂಬುದಕ್ಕೆ ಇಂದಿನ ಅನೇಕ ಕಹಿ ಅನುಭವಗಳು ಸಾಕ್ಷಿಯಿವೆ. ಯುವಕರು ಇಂತಹ ಕೆಲವು ಅಪಾಯಕಾರಿ ಧೋರಣೆಗಳಿಂದ ದೂರವಿರಬೇಕು:

1. ಹಣವೇ ಮುಖ್ಯವಾದ ಬಂಡವಾಳ: ಆರಂಭದಲ್ಲಿ ಅತಿ ಹೆಚ್ಚು ಕಾಳಜಿ ತೋರುವಂತೆ ನಟಿಸುವ ಇವರು, ಕ್ರಮೇಣ ವಿವಿಧ ಕಾರಣಗಳನ್ನು ಮುಂದಿಟ್ಟುಕೊಂಡು (ಉದಾಹರಣೆಗೆ: ತುರ್ತು ಖರ್ಚು, ಶಾಪಿಂಗ್, ಐಷರಾಮಿ ಜೀವನ, ಅಥವಾ ಸಾಲ ತೀರಿಸುವುದು) ಯುವಕರಿಂದ ಹಣವನ್ನು ಕಿತ್ತುಕೊಳ್ಳಲು ಪ್ರಾರಂಭಿಸುತ್ತಾರೆ. ಹಣ ನೀಡುವುದು ನಿಂತ ತಕ್ಷಣ ಅವರ ಮುಖ, ಪ್ರೀತಿ ಎರಡೂ ಬದಲಾಗುತ್ತವೆ.

2. ಲೌಕಿಕ ಭೋಗಗಳ ವ್ಯಾಮೋಹ: ದುಬಾರಿ ಹೋಟೆಲ್ ಪಾರ್ಟಿಗಳು, ಐಷರಾಮಿ ಕಾರುಗಳಲ್ಲಿ ಸುತ್ತಾಡುವುದು ಮತ್ತು ವೀಕೆಂಡ್‌ಗಳಲ್ಲಿ ಮೋಜು-ಮಸ್ತಿ ಮಾಡುವುದು ಇವರ ಮುಖ್ಯ ಉದ್ದೇಶವಾಗಿರುತ್ತದೆ. ಕೇವಲ ತಮ್ಮ ಐಷರಾಮಿ ಬಯಕೆಗಳನ್ನು ಈಡೇರಿಸಿಕೊಳ್ಳಲು ಮಾತ್ರ ಸಂಗಾತಿಯನ್ನು ಬಳಸಿಕೊಳ್ಳುತ್ತಾರೆ.

3. ಸೋಶಿಯಲ್ ಮೀಡಿಯಾ ಹೈಡ್ರಾಮಾ: ಏಕಕಾಲದಲ್ಲಿ ಅನೇಕರೊಂದಿಗೆ ಸಂಪರ್ಕದಲ್ಲಿರುವುದು, ಯುವಕರ ಭಾವನೆಗಳೊಂದಿಗೆ ಚೆಲ್ಲಾಟವಾಡುವುದು ಮತ್ತು ತಪ್ಪುಗಳು ಸಿಕ್ಕಿಬಿದ್ದಾಗ ಕಣ್ಣೀರಿನ ನಾಟಕವಾಡಿ ಎದುರಿನವರನ್ನೇತಪ್ಪಿತಸ್ಥರಂತೆಬಿಂಬಿಸುವುದುಇವರಚಾಳಿಯಾಗಿರುತ್ತದೆ.

4. ಸುಳ್ಳು ಆರೋಪಗಳ ಭಯಾನಕ ಬೆದರಿಕೆ: ಇದು ಅತ್ಯಂತ ಅಪಾಯಕಾರಿ ಮುಖ. ಕೆಲವರು ಮುಗ್ಧ ಯುವಕರೊಂದಿಗೆ ಸಲುಗೆಯಿಂದಿದ್ದು, ನಂತರದ ದಿನಗಳಲ್ಲಿ ತಮ್ಮದೇ ಸ್ವಾರ್ಥಕ್ಕಾಗಿ ಅವರ ಮೇಲೆ ಸುಳ್ಳು ಪ್ರಕರಣಗಳನ್ನು ಹೂಡುವುದಾಗಿ ಅಥವಾ ಮಾನಹಾನಿ ಮಾಡುವುದಾಗಿ ಬೆದರಿಸಿ ಬ್ಲ್ಯಾಕ್‌ಮೇಲ್ ಮಾಡುವ ಕೃತ್ಯಗಳೂ ನಡೆಯುತ್ತಿವೆ.


ಶ್ರೀಧರ ದೊಡಮನಿ. ಯುವ ಸಾಹಿತಿ

ಕಾನೂನಿನ ಕಣ್ಣು ಮತ್ತು ಯುವಕರ ಅಸಹಾಯಕತೆ: ಇಂದಿನ ಕಹಿ ಸತ್ಯ ಇಂದಿನ ವ್ಯವಸ್ಥೆಯಲ್ಲಿ ಅತ್ಯಂತ ಗಂಭೀರವಾಗಿ ಚರ್ಚಿಸಬೇಕಾದ ವಿಷಯವೆಂದರೆ ಅದು ಕಾನೂನು ಮತ್ತು ಯುವಕರ ಅಸಹಾಯಕತೆ. ಸಮಾಜದಲ್ಲಿ ಕೆಲವೊಮ್ಮೆ ಹುಡುಗನ ಕಡೆಯಿಂದ ಯಾವುದೇ ತಪ್ಪು ಇರುವುದಿಲ್ಲ, ಆತ ಸಂಪೂರ್ಣ ನಿರ್ದೋಷಿಯಾಗಿರುತ್ತಾನೆ. ಆದರೂ ಕಾನೂನಿನ ದೃಷ್ಟಿಯಲ್ಲಿ ಅಥವಾ ಸಮಾಜದ ಮುಖದಲ್ಲಿ ಹುಡುಗಿಯರ ಕಣ್ಣೀರು ಮತ್ತು ಅವರ ಮಾತುಗಳನ್ನೇ ಅಂತಿಮವೆಂದು ನಂಬಿ, ನಿರ್ದೋಷಿ ಹುಡುಗರನ್ನೇ ತಪ್ಪಿತಸ್ಥರಂತೆ ಬಿಂಬಿಸುವ ಮತ್ತು ನೋಡುವ ಪರಿಸ್ಥಿತಿ ಇಂದು ನಿರ್ಮಾಣವಾಗಿದೆ. ಮಹಿಳೆಯರ ರಕ್ಷಣೆಗಾಗಿ ಕಾನೂನುಗಳು ಇರುವುದು ಅತ್ಯಾವಶ್ಯಕವೇ, ಆದರೆ ಇಂದಿನ ಕೆಲವು ಸಂದರ್ಭಗಳಲ್ಲಿ ಅದೇ ಕಾನೂನಿನ ದುರ್ಬಳಕೆ ಕೆಲ ವಂಚಕಿಯರಿಗೆ ಅಸ್ತ್ರವಾಗುತ್ತಿದೆ. ಹುಡುಗಿಯರಿಗೆ ರಕ್ಷಣೆಗಾಗಿ ಹತ್ತು ಹಲವು ಕಠಿಣ ಕಾನೂನುಗಳಿರುವಾಗ, ಅಂತಹ ಸುಳ್ಳು ಬಲೆಗೆ ಬಿದ್ದು ಸರ್ವಸ್ವವನ್ನೂ ಕಳೆದುಕೊಳ್ಳುವ ನಿರ್ದೋಷಿ ಯುವಕರಿಗೆ ರಕ್ಷಣೆ ನೀಡಲು ಯಾಕೆ ಅಂತಹ ಬಲವಾದ ಕಾನೂನುಗಳಿಲ್ಲ? ಹುಡುಗನೊಬ್ಬ ಮೋಸಹೋದಾಗ ಅಥವಾ ತಪ್ಪು ಮಾಡದಿದ್ದರೂ ಸುಳ್ಳು ಆರೋಪಗಳಿಗೆ ಸಿಲುಕಿ ನರಳುವಾಗ ಆತನ ಕಣ್ಣೀರನ್ನು ಒರೆಸುವವರು ಯಾರು? ಈ ಅಸಮತೋಲನವು ಇಂದಿನ ಯುವಕರನ್ನು ಮಾನಸಿಕವಾಗಿ ತೀವ್ರವಾಗಿ ಕುಗ್ಗಿಸುತ್ತಿದೆ.

**ಯುವಕರು ಎದುರಿಸುತ್ತಿರುವ ಮಾನಸಿಕ ಜಂಜಾಟಗಳು:** ಈ ರೀತಿಯ ಮೋಸದ ಬಲೆಗೆ ಬಿದ್ದು ಎಲ್ಲವನ್ನೂ ಕಳೆದುಕೊಂಡ ಅನೇಕ ಯುವಕರು ಇಂದು ತೀವ್ರ ಖಿನ್ನತೆಗೆ (ಆಜಿಡಿಜಿಛಿ-ುಠಿಟ) ಒಳಗಾಗುತ್ತಿದ್ದಾರೆ. ತಾವು ನಂಬಿದವರಿಂದಲೇ ದ್ರೋಹ ಎದುರಾದಾಗ, ಜೀವನದ ಮೇಲಿನ ಭರವಸೆಯೇ ಹೊರಟುಹೋಗುತ್ತದೆ. ತಮ್ಮ ಓದು, ವೃತ್ತಿಜೀವನ ಮತ್ತು ಹೆತ್ತವರ ಕನಸುಗಳನ್ನು ನಿರ್ಲಕ್ಷಿಸಿ ತಮ್ಮ ಅಮೂಲ್ಯವಾದ ಯೌವನವನ್ನು ಕತ್ತಲಿಗೆ ತಳ್ಳಿಕೊಳ್ಳುತ್ತಿದ್ದಾರೆ. ಸಮಾಜದ ಭಯದಿಂದ ಈ ನೋವನ್ನು ಹೊರಹಾಕಲಾಗದೆ ಒಳಗೊಳಗೇ ನರಳಿ, ಮಾನಸಿಕವಾಗಿ ಕುಗ್ಗಿಹೋಗುವವರ ಸಂಖ್ಯೆ ದೊಡ್ಡದಿದೆ.

**ಜಾಣತನದ ಹೆಜ್ಜೆಗಳು: ನಮ್ಮನ್ನು ನಾವು ರಕ್ಷಿಸಿಕೊಳ್ಳುವುದು ಹೇಗೆ?:**

* ಭಾವನೆಗಳ ಮೇಲೆ ಹತೋಟಿ ಇರಲಿ: ಯಾರೇ ಹೊಸಬರು ಪರಿಚಯವಾದಕ್ಷಣ ಅವರ ಸಿಹಿ ಮಾತುಗಳಿಗೆ ತಕ್ಷಣವೇ ಮರುಳಾಗಬೇಡಿ. ಎದುರಿನವರ ವ್ಯಕ್ತಿತ್ವವನ್ನು ಅರಿಯಲು ಸಮಯ ನೀಡಿ.
* ಆರ್ಥಿಕವ್ಯವಹಾರಗಳಲ್ಲಿ ಜಾಗರೂಕತೆ: ಪ್ರೀತಿ ಅಥವಾ ಸ್ನೇಹದ ಹೆಸರಿನಲ್ಲಿ ಯಾರೊಂದಿಗೂ ದೊಡ್ಡ ಪ್ರಮಾಣದ ಹಣಕಾಸಿನ ವ್ಯವಹಾರಗಳನ್ನು ಮಾಡಬೇಡಿ. ನಿಮ್ಮ ಬೆವರು ಸುರಿಸಿದ **ದುಡಿಮೆಗೆ ಬೆಲೆ ಕೊಡಿ**
* ತೋರಿಕೆಯ ಬದುಕಿಗೆ ಮರುಳಾಗಬೇಡಿ: ಸಾಮಾಜಿಕ ಜಾಲತಾಣಗಳಲ್ಲಿ ಕಾಣುವ ಅದ್ದೂರಿ ಜೀವನವೇ ನೈಜ ಬದುಕಲ್ಲ. ಬಾಹ್ಯ ಸೌಂದರ್ಯಕ್ಕಿಂತ ಆಂತರಿಕ ಸಂಸ್ಕಾರಕ್ಕೆ ಮಹತ್ವ ನೀಡಿ.
* ಹಿರಿಯರ ಅನುಭವಕ್ಕೆ ಕಿವಿಗೊಡಿ: ನಿಮ್ಮ ತಂದೆ-ತಾಯಿ ಅಥವಾ ನಿಜವಾದ ಸ್ನೇಹಿತರಿಗೆ ಯಾರೊಬ್ಬರ ಬಗ್ಗೆಯಾದರೂ ಸಂಶಯವಿದ್ದರೆ, ಅದನ್ನು ಗಂಭೀರವಾಗಿ ಪರಿಗಣಿಸಿ.

ಬದುಕು ಬಹಳ ಸುಂದರವಾದದ್ದು ಮತ್ತು ನಮಗೆ ನೂರಾರು ಅವಕಾಶಗಳನ್ನು ನೀಡುತ್ತದೆ. ಅದನ್ನು ಕೆಲವರ ಕಪಟ ನಾಟಕಗಳಿಗೆ ಸಿಲುಕಿಸಿ ಹಾಳುಮಾಡಿಕೊಳ್ಳಬೇಡಿ. ನಂಬಿಕೆ ಎನ್ನುವುದು ಎಲ್ಲರಿಗೂ ಸುಲಭವಾಗಿ ಸಿಗುವ ವಸ್ತುವಲ್ಲ. ಪ್ರಾಮಾಣಿಕವಾಗಿರುವವರನ್ನು ಗುರುತಿಸಿ ಗೌರವಿಸಿ, ಆದರೆ ನಿಮ್ಮ ಮುಗ್ಧತೆಯನ್ನು ಯಾರೂ ಬಳಸಿಕೊಳ್ಳದಂತೆ ಎಚ್ಚರದಿಂದಿರಿ. ನಿಮ್ಮ ಸ್ವಾಭಿಮಾನವೇ ನಿಮ್ಮ ಅತಿ ದೊಡ್ಡ ಆಭರಣವಾಗಿರಲಿ.

# ಸಮರ್ಪಕ ಬಸ್ ಸೌಲಭ್ಯಕ್ಕೆ ಆಗ್ರಹಿಸಿ ಯಾವಗಲ್ಲನಲ್ಲಿ ಪ್ರತಿಭಟನೆ

**ರೋಣ:** ಸಮರ್ಪಕ ಬಸ್ ಸೌಲಭ್ಯಕ್ಕೆ ಆಗ್ರಹಿಸಿ ತಾಲೂಕಿನ ಯಾವಗಲ್ಲ ಗ್ರಾಮದಲ್ಲಿ ರೋಣ-ನರಗುಂದ ಬಸ್‌ಗಳ ಸಂಚಾರ ತಡೆದು ಗ್ರಾಮಸ್ಥರು ಹಾಗೂ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದರು.

ಬೆಳವಣಕಿ, ಯಾವಗಲ್ಲ ಹಾಗೂ ಹಡಗಲಿ ಭಾಗದ ವಿದ್ಯಾರ್ಥಿಗಳು ಶಾಲೆ, ಕಾಲೇಜ್‌ಗೆ ತೆರಳಲು ಸಮರ್ಪಕ ಬಸ್ ಸೌಲಭ್ಯವಿಲ್ಲ. ಬಸ್ ಇದ್ದರೂ ವಿದ್ಯಾರ್ಥಿಗಳನ್ನು ಕಂಡರೆ ಚಾಲಕರು ಬಸ್ ನಿಲ್ಲಿಸುತ್ತಿಲ್ಲ. ಇದರಿಂದ ನಮಗೆ ಶಾಲೆ-ಕಾಲೇಜ್‌ಗೆ ತೆರಳಲು ತೊಂದರೆಯಾಗುತ್ತಿದೆ. ಈ ಮಾರ್ಗದಲ್ಲಿ ಇನ್ನು ಹೆಚ್ಚಿನ ಬಸ್‌ಗಳನ್ನು ಓಡಿಸಬೇಕು. ಈ ಕುರಿತು ರೋಣ ಹಾಗೂ ನರಗುಂದ ಸಾರಿಗೆ ವ್ಯವಸ್ಥಾಪಕರು ಸ್ಥಳಕ್ಕೆ ಬಂದು ಸಮಸ್ಯೆ ಬಗೆಹರಿಸುವ ಲಿಖಿತ ಭರವಸೆ ನೀಡಬೇಕು. ಇಲ್ಲದಿದ್ದರೆ ಪ್ರತಿಭಟನೆ ಕೈ ಬಿಡುವುದಿಲ್ಲ ಎಂದು ಪಟ್ಟು ಹಿಡಿದರು.

ಸ್ಥಳಕ್ಕೆ ಆಗಮಿಸಿದ ರೋಣ ಡಿಪೋ ಸಾರಿಗೆ ಇಲಾಖೆ ಅಧಿಕಾರಿಗಳು ಸಿಬ್ಬಂದಿ ಹಾಗೂ ಬಸ್‌ಗಳ ಮಾರ್ಗಗಳನ್ನು ನೋಡಿಕೊಂಡು ಅನುಕೂಲ ಕಲ್ಪಿಸಿಕೊಡಲಾಗುವುದು ಎಂದು ಭರವಸೆ ನೀಡಿದ ಹಿನ್ನೆಲೆಯಲ್ಲಿ ಪ್ರತಿಭಟನೆ ಕೈಬಿಟ್ಟರು.



# ಅಕ್ಟೋಬರ್ 11 ರಿಂದ ಮೈಸೂರಿನಲ್ಲಿ ರಾಜ್ಯ ಮಟ್ಟದ ದಸರಾ ಕ್ರೀಡಾಕೂಟ

**ಕೊಪ್ಪಳ :** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ರಾಜ್ಯ ಮಟ್ಟದ ದಸರಾ ಕ್ರೀಡಾಕೂಟವನ್ನು ಅಕ್ಟೋಬರ್ 11 ರಿಂದ 14 ರವರೆಗೆ ಮೈಸೂರಿನಲ್ಲಿ ಆಯೋಜಿಸಲಾಗಿದೆ.

2026-27ನೇ ಸಾಲಿನ ಕಲಬುರಗಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟವನ್ನು ಕೊಪ್ಪಳ ಜಿಲ್ಲೆಯಲ್ಲಿ ಸಹ ಆಯೋಜಿಸಲಾಗಿದ್ದು, ಈ ಕೂಟದಲ್ಲಿ ಥ್ರೋಬಾಲ್, ನೆಟ್‌ಬಾಲ್, ಬಾಲ್‌ಬ್ಯಾಡ್ಮಿಂಟನ್, ಕುಸ್ತಿ ಹಾಗೂ ಕರಾಟೆ ಕ್ರೀಡೆಗಳಲ್ಲಿ ಭಾಗವಹಿಸಿ ವಿಜೇತರಾಗಿ ರಾಜ್ಯ ಮಟ್ಟಕ್ಕೆ ಆಯ್ಕೆಯಾದ ಕ್ರೀಡಾಪಟುಗಳ ವಿವರಗಳನ್ನು ಈಗಾಗಲೇ ಇ-ಪೋರ್ಟಲ್‌ನಲ್ಲಿ ನೋಂದಾಯಿಸಲಾಗಿದೆ.

ಪ್ರತಿವರ್ಷದಂತೆತಾಲೂಕು,ಜಿಲ್ಲಾಹಾಗೂವಿಭಾಗಮಟ್ಟಗಳಲ್ಲಿಕ್ರೀಡಾಕೂಟಆಯೋಜಿಸಲಾಗುತ್ತಿದ್ದು, ವಿಭಾಗಮಟ್ಟದಲ್ಲಿವಿಜೇತರಾಗಿಆಯ್ಕೆಯಾದಕ್ರೀಡಾಪಟುಗಳಿಗೆಮಾತ್ರಮೈಸೂರಿನಲ್ಲಿನಡೆಯಲಿರುವ ರಾಜ್ಯ ಮಟ್ಟದ ಕೂಟದಲ್ಲಿ ಪಾಲ್ಗೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಆಯ್ಕೆಯಾದ ಕ್ರೀಡಾಪಟುಗಳು ಅಕ್ಟೋಬರ್ 11ರಂದು ಬೆಳಿಗ್ಗೆ ಮೈಸೂರಿನ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಕಡ್ಡಾಯವಾಗಿ ವರದಿ ಮಾಡಿಕೊಳ್ಳಬೇಕಾಗಿದೆ.

ವಿಭಾಗ ಮಟ್ಟದಲ್ಲಿ ವಿಜೇತರಾಗಿ ರಾಜ್ಯ ಮಟ್ಟಕ್ಕೆ ಅಧಿಕೃತವಾಗಿ ಆಯ್ಕೆಯಾಗಿರುವ ಕ್ರೀಡಾಪಟುಗಳಿಗೆ ಮಾತ್ರ ಊಟ ಮತ್ತು ವಸತಿ ವ್ಯವಸ್ಥೆಯನ್ನು ಕಲ್ಪಿಸಲಾಗುವುದು. ಆಯ್ಕೆಯಾಗದ ಅಥವಾ ವಿಜೇತರಲ್ಲದ ಇತರ ಕ್ರೀಡಾಪಟುಗಳಿಗೆ ಯಾವುದೇ ರೀತಿಯ ವ್ಯವಸ್ಥೆ ಇರುವುದಿಲ್ಲ ಎಂದು ಇಲಾಖೆ ಸ್ಪಷ್ಟಪಡಿಸಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ, ಗದಗ ರಸ್ತೆ, ಕೊಪ್ಪಳ ಕಚೇರಿಯ ದೂರವಾಣಿ ಸಂಖ್ಯೆ: 08539-230121 ಅನ್ನು ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಿರೇಹಾಳ, ಹೊಳೆಆಲೂರ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ ನಾಳೆ

**ರೋಣ:** 110/31/11 ಕೆವಿ ಹಿರೇಹಾಳ ಮತ್ತು 33/11 ಕೆವಿ ಹೊಳೆ ಆಲೂರ ವಿದ್ಯುತ್ ವಿತರಣಾ ಉಪ-ಕೇಂದ್ರಗಳ ತ್ರೈಮಾಸಿಕ ನಿರ್ವಹಣಾ ಕೆಲಸ ಕೈಗೊಳ್ಳುವುದರಿಂದ ಅಕ್ಟೋಬರ್ 8ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ.

ಆದ್ದರಿಂದ ಮೇಲ್ಕಂಡ ವಿದ್ಯುತ್ ವಿತರಣಾ ಉಪ-ಕೇಂದ್ರಗಳಿಂದ ನಿರಂತರ ಜ್ಯೋತಿ ಮತ್ತು ನೀರಾವರಿ ಪಂಪ್‌ಸೆಟ್ ವಿದ್ಯುತ್ ಪೂರೈಕೆಯಾಗುತ್ತಿರುವ ಹಿರೇಹಾಳ, ಬಳಗೋಡ, ಹೊನ್ನಿಗನೂರ, ಮಾಡಲಗೇರಿ ಸೈನಾಪೂರ, ಕೊತಬಾಳ,ಮುಗುಳಿತಳ್ಳಿಹಾಳ,ಹೊಳೆಆಲೂರ,ಹುನಗುಂಡಿ, ಬೆನಹಾಳ,ಅಮರಗೋಳ,ಕುರುವಿನಕೊಪ್ಪ,ಹೊಳೆಹಡಗಲಿ, ಬಿ.ಎಸ್. ಬೇಲೇರಿ, ಬಸರಕೋಡ, ಅಸೂಟಿ, ಮೇಲ್ಮಠ, ಮೇಗೂರು, ಕರಮಡಿ, ಮಾಳವಾಡ, ಬೋಪಳಾಪೂರ, ಗಾಡಗೋಳಿ, ಹೊಳೆಮಣ್ಣೂರ, ಮೆಣಸಗಿ, ಕರಕಿಕಟ್ಟಿ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ



ಎಂದು ರೋಣ ಹೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಇಂಜನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೊಳೆಆಲೂರಿನಲ್ಲಿ 'ಮನೆಗೊಂದು ಗ್ರಂಥಾಲಯ' ಅನುಷ್ಠಾನ ಅಭಿನಂದನಾ ಪತ್ರ ವಿತರಣಾ ಸಮಾರಂಭ

ಹೊಳೆಆಲೂರ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಪುಸ್ತಕ ಪ್ರಾಧಿಕಾರ, ಜಿಲ್ಲಾ ಜಾಗೃತ ಸಮಿತಿ, ಗದಗ, ಎಸ್.ಎಸ್. ಆಡಿನ ಜನಸೇವಾ ಸಂಸ್ಥೆ (ರಿ.), ಹೊಳೆಆಲೂರ ಹಾಗೂ ಕನ್ನಡ ಸಾಹಿತ್ಯ ಪರಿಷತ್ತು, ಹೋಬಳಿ ಘಟಕ, ಹೊಳೆಆಲೂರ ಇವರ ಆಶ್ರಯದಲ್ಲಿ 'ಮನೆಗೊಂದು ಗ್ರಂಥಾಲಯ' ಅನುಷ್ಠಾನ ಹಾಗೂ ಅಭಿನಂದನಾ ಪತ್ರ ವಿತರಣಾ ಸಮಾರಂಭ ಅ. 7ರಂದು ಬೆಳಿಗ್ಗೆ 10.30ಕ್ಕೆ ಹೊಳೆಆಲೂರಿನ ಶ್ರೀ ಯಚ್ಚರೇಶ್ವರ ಮಠದಲ್ಲಿ ನಡೆಯಲಿದೆ.

ಪೂಜ್ಯ ಶ್ರೀ ಯಚ್ಚರೇಶ್ವರ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ನಡೆಯುವ ಕಾರ್ಯಕ್ರಮವನ್ನು ಸಾಹಿತಿ ಹಾಗೂ ಉದ್ಯಮಿ ಶ್ರೀ ಹೆಚ್.ಕೆ. ಪಟೇಲ ಉದ್ಘಾಟಿಸಲಿದ್ದು, 'ಮನೆಗೊಂದು ಗ್ರಂಥಾಲಯ' ಜಿಲ್ಲಾ ಜಾಗೃತ ಸಮಿತಿ, ಗದಗದ ಸಂಚಾಲಕರಾದ ಶ್ರೀ ಎ.ಎಸ್. ಮಕಾನದಾರ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ನಿವೃತ್ತ ಶಿಕ್ಷಕ ಶ್ರೀ ಬಿ.ಆರ್. ಬಡಿಗೇರ, ಸಾಹಿತಿಗಳಾದ ಶ್ರೀ ಪ್ರಹ್ಲಾದ್ ಮುಂಡಾಸದ, ಶ್ರೀ ಪಿ.ಡಿ. ಶೇಬಣ್ಣವರ, ಕನ್ನಡ ಸಾಹಿತ್ಯ ಪರಿಷತ್ತು, ಹೊಳೆಆಲೂರಿನ ಅಧ್ಯಕ್ಷರಾದ ಶ್ರೀ ವ್ಹಿ.ಎಂ. ವಸ್ತ್ರದ ಹಾಗೂ ಕನ್ನಡ ಸಾಹಿತ್ಯ ಪರಿಷತ್ತು, ಹೊಳೆಆಲೂರಿನ ಕೋಶಾಧ್ಯಕ್ಷರಾದ ಶ್ರೀ ಪಿ.ವ್ಹಿ. ಪತ್ತಾರ ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಡಯಟ್, ಗದಗದ ವಿಶ್ರಾಂತ ಉಪನ್ಯಾಸಕರಾದ ಶ್ರೀ ರಾಮಪ್ಪ ಫ. ಲೊಟಗೇರಿ ಅವರು ಉಪನ್ಯಾಸ ನೀಡಲಿದ್ದಾರೆ. ಕಾರ್ಯಕ್ರಮದ ನಿರ್ವಹಣೆಯನ್ನು ಸರ್ಕಾರಿ ಪ್ರೌಢಶಾಲೆ, ಹೆಸರೂರಿನ ಶಿಕ್ಷಕರಾದ ಶ್ರೀ ರವಿ ದೇವರಡ್ಡಿ ವಹಿಸಲಿದ್ದು, ಜಿಲ್ಲಾ ಜಾಗೃತ ಸಮಿತಿ, ಗದಗದ ಸದಸ್ಯ ಹಾಗೂ 'ಮನೆಗೊಂದು ಗ್ರಂಥಾಲಯ' ಅನುಷ್ಠಾನದ ಹೊಳೆಆಲೂರಿನ ಶ್ರೀ ಎಸ್.ಕೆ. ಆಡಿನ ಅವರು ಸ್ವಾಗತ ಹಾಗೂ ಪ್ರಾಸ್ತಾವಿಕ ನುಡಿ ನೀಡಲಿದ್ದಾರೆ.

ಈ ಸಂದರ್ಭದಲ್ಲಿ 'ಮನೆಗೊಂದು ಗ್ರಂಥಾಲಯ' ಅನುಷ್ಠಾನಗೊಳಿಸಿರುವ 12 ಗಣ್ಯರನ್ನು ಹಾಗೂ ಗ್ರಂಥಾಲಯ ಅನುಷ್ಠಾನದಲ್ಲಿ ಪಾಲ್ಗೊಂಡಿರುವ 26 ಶಾಲಾ ವಿದ್ಯಾರ್ಥಿಗಳನ್ನು ಅಭಿನಂದನಾ ಪತ್ರ ನೀಡಿ ಗೌರವಿಸಲಾಗುವುದು.

ಕಾರ್ಯಕ್ರಮದಲ್ಲಿ ಸಾಹಿತ್ಯಾಸಕ್ತರು, ಶಿಕ್ಷಕರು, ವಿದ್ಯಾರ್ಥಿಗಳು, ಪೋಷಕರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಆಯೋಜಕರು ಕೋರಿದ್ದಾರೆ.

# ಅ.11ರಂದು ಉಚಿತ ಕ್ಯಾನ್ಸರ್ ತಪಾಸಣೆ; ಸಾರ್ವಜನಿಕರಿಗೆ ಕರೆ

**ಗಂಗಾವತಿ:** ಎಎಸ್‌ಐ-ಕೆಎಸ್ಸಿ ವಿಜಯನಗರ ಶಾಖೆ, ಭಾರತೀಯ ವೈದ್ಯಕೀಯ ಸಂಘ (ಐಎಂಎ), ಲಯನ್ಸ್ ಕ್ಲಬ್ ಹಾಗೂ ಕರ್ನಾಟಕ ಕ್ಯಾನ್ಸರ್ ಚಿಕಿತ್ಸೆ ಮತ್ತು ಸಂಶೋಧನಾ ಸಂಸ್ಥೆ ಸಹಯೋಗದಲ್ಲಿ ಅ.11ರಂದು ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ ಆಯೋಜಿಸಲಾಗಿದೆ ಎಂದು ಐಎಂಎ ಅಧ್ಯಕ್ಷ ಡಾ. ಮಲ್ಲನಗೌಡ ಪಿ. ಪಾಟೀಲ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಅ.11ರಂದು ಭಾನುವಾರ ನಗರದ ಐಎಂಎ ಹಾಲ್‌ನಲ್ಲಿ ಬೆಳಗ್ಗೆ 9ರಿಂದ ಮಧ್ಯಾಹ್ನ 1ರವರೆಗೆ ಶಿಬಿರ ನಡೆಯಲಿದೆ. ಸಾರ್ವಜನಿಕರು ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

ಶಿಬಿರದಲ್ಲಿ ಬಾಯಿ ಕ್ಯಾನ್ಸರ್, ಸ್ತನ ಕ್ಯಾನ್ಸರ್ ಹಾಗೂ ಗರ್ಭಕಂಠದ ಕ್ಯಾನ್ಸರ್ ತಪಾಸಣೆಯನ್ನು ಉಚಿತವಾಗಿ ನಡೆಸಲಾಗುವುದು. ಬಾಯಿಯಲ್ಲಿ ಗುಣವಾಗದ ಹುಣ್ಣು, ಬಿಳಿ ಅಥವಾ ಕೆಂಪು ಮಚ್ಚೆ, ಗಡ್ಡೆ, ನಿರಂತರ ನೋವು ಹಾಗೂ ಕುತ್ತಿಗೆಯಲ್ಲಿ ಗಡ್ಡೆ ಕಂಡುಬಂದರೆ ಬಾಯಿ ಕ್ಯಾನ್ಸರ್ ತಪಾಸಣೆ ಮಾಡಿಸಿಕೊಳ್ಳಬೇಕು




ಎಂದು ಸಲಹೆ ನೀಡಿದರು.

ಸ್ತನದಲ್ಲಿ ಗಡ್ಡೆ, ಗಾತ್ರದಲ್ಲಿ ಬದಲಾವಣೆ, ಮೊಲೆತೊಟ್ಟು ಒಳಗೆ ಹೋಗುವುದು, ರಕ್ತಸ್ರಾವ ಅಥವಾ ಚರ್ಮದಲ್ಲಿ ಬದಲಾವಣೆ ಕಂಡುಬಂದರೆ ಸ್ತನ ಕ್ಯಾನ್ಸರ್ ತಪಾಸಣೆ ಅಗತ್ಯವಿದೆ. ಮುಟ್ಟಿನ ನಡುವೆ ಅಸಹಜ ರಕ್ತಸ್ರಾವ, ಲೈಂಗಿಕ ಸಂಪರ್ಕದ ನಂತರ ರಕ್ತಸ್ರಾವ, ಮೆನೋಪಾಸ್ ನಂತರ ರಕ್ತಸ್ರಾವ, ಅಸಹಜ ಅಥವಾ ದುರ್ವಾಸನೆಯ ಯೋನಿ ಸ್ರಾವ ಹಾಗೂ ನಿರಂತರ ಕೆಳಹೊಟ್ಟೆ ನೋವು ಕಂಡುಬಂದಲ್ಲಿ ಗರ್ಭಕಂಠದ ಕ್ಯಾನ್ಸರ್ ತಪಾಸಣೆ ಮಾಡಿಸಿಕೊಳ್ಳುವಂತೆ ಅವರು ತಿಳಿಸಿದರು.

ಶಿಬಿರದಲ್ಲಿ ಭಾಗವಹಿಸಲು ನೋಂದಣಿಗಾಗಿ ಹನುಮೇಶ್: 9060332658, ಶಂಷಾದ್: 73496 94980 ಇವರನ್ನು ಸಂಪರ್ಕಿಸಬಹುದು.

ಪತ್ರಿಕಾಗೋಷ್ಠಿಯಲ್ಲಿ ಡಾ. ವೆಂಕಟೇಶ್, ಡಾ. ಕೆ.ಎನ್. ಮಧುಸೂದನ, ಲಯನ್ಸ್ ಕ್ಲಬ್ ಅಧ್ಯಕ್ಷ ಡಾ. ಜಿ. ದೇವರಾಜ, ಡಾ. ವಿ.ವಿ. ಚಿನಿವಾಲರ, ಐಎಂಎ ಖಜಾಂಚಿ ಡಾ. ಅರವಿಂದ ಹಾಗೂ ಕಾರ್ಯದರ್ಶಿ ಡಾ. ನಾಗರಾಜ ಉಪಸ್ಥಿತರಿದ್ದರು.

# ಆಸ್ಪತ್ರೆಗೇ ನುಗ್ಗಿದ ಚರಂಡಿ ನೀರು! ರೋಗಿಗಳು, ಸಾರ್ವಜನಿಕರು ಹೈರಾಣ

**ಕುಷ್ಟಗಿ:** ತಾಲೂಕು ಆಸ್ಪತ್ರೆ ಆವರಣಕ್ಕೆ ಚರಂಡಿ ನೀರು ನುಗ್ಗಿ ಅವಾಂತರ ಸೃಷ್ಟಿಯಾಗಿದ್ದು, ರೋಗಿಗಳು ಹಾಗೂ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುವಂತಾಗಿದೆ. ಮಳೆ ಬಂದಾಗಲೆಲ್ಲ ಇದೇ ಸಮಸ್ಯೆ ಮರುಕಳಿಸುತ್ತಿದ್ದರೂ ಶಾಶ್ವತ ಪರಿಹಾರ ಕೈಗೊಳ್ಳದಿರುವುದಕ್ಕೆ ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಆಸ್ಪತ್ರೆಯ ಆವರಣಕ್ಕೆ ಹೊಂದಿಕೊಂಡಿರುವ ಚರಂಡಿ ವ್ಯವಸ್ಥೆ ಸಮರ್ಪಕವಾಗಿಲ್ಲ. ಚರಂಡಿಯನ್ನು ಸಂಪೂರ್ಣವಾಗಿ ಮುಚ್ಚಲಾಗಿದ್ದು, ಅದರ ಮೇಲೆಯೇ ಗೂಡಂಗಡಿಗಳು ನಿರ್ಮಾಣವಾಗಿವೆ. ಮತ್ತೊಂದೆಡೆ, ರಸ್ತೆಯ ಬದಿಯ ಚರಂಡಿ ಬ್ಲಾಕ್ ಆದಾಗ ಮಳೆನೀರಿನೊಂದಿಗೆ ಗಲೀಜು ನೀರು ಆಸ್ಪತ್ರೆ ಆವರಣಕ್ಕೆ ನುಗ್ಗುತ್ತಿದೆ.

ಇದರಿಂದ ಆಸ್ಪತ್ರೆ ಆವರಣದಲ್ಲಿ ನೀರು ನಿಂತು



ಕೆಸರು ಹಾಗೂ ದುರ್ವಾಸನೆ ಉಂಟಾಗುತ್ತಿದೆ. ಚಿಕಿತ್ಸೆಗಾಗಿ ಆಗಮಿಸುವ ರೋಗಿಗಳು ಮತ್ತು ಅವರ ಸಂಬಂಧಿಕರು ನೀರಿನಲ್ಲೇ ಸಂಚರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ.

ಆಸ್ಪತ್ರೆಯಂತಹ ಸಾರ್ವಜನಿಕ ಆರೋಗ್ಯ ಕೇಂದ್ರದಲ್ಲೇ ಕಲುಷಿತ ನೀರು ನಿಲ್ಲುತ್ತಿರುವುದು ಆತಂಕಕ್ಕೆ ಕಾರಣವಾಗಿದೆ. ಸ್ವಚ್ಛತೆ ಹದಗೆಡುವುದರಿಂದ ಸಾಂಕ್ರಾಮಿಕ ರೋಗಗಳ ಭೀತಿ ಎದುರಾಗುವ ಸಾಧ್ಯತೆಯೂ ಇದೆ ಎಂದು ಸಾರ್ವಜನಿಕರು ಕಳವಳ ವ್ಯಕ್ತಪಡಿಸಿದ್ದಾರೆ.

ಸಮಸ್ಯೆ ಹಲವು ಬಾರಿ ಗಮನಕ್ಕೆ ಬಂದಿದ್ದರೂ ಶಾಶ್ವತ ಪರಿಹಾರ ದೊರೆತಿಲ್ಲ ಎನ್ನಲಾಗಿದ್ದು, ಪುರಸಭೆ ಅಧಿಕಾರಿಗಳು ಕೂಡಲೇ ಚರಂಡಿ ವ್ಯವಸ್ಥೆಯನ್ನು ಪರಿಶೀಲಿಸಿ, ನೀರು ಸರಾಗವಾಗಿ ಹರಿಯುವಂತೆ ಕ್ರಮ ಕೈಗೊಳ್ಳಬೇಕು. ಆಸ್ಪತ್ರೆ ಆವರಣಕ್ಕೆ ಚರಂಡಿ ನೀರು ನುಗ್ಗದಂತೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

SATYAMITHI KANNADA DAILY MORNING OWNER, PUBLISHER, BY: CHANNAVEERAPPA NINGAPPA SAMAGANDI PUBLISHED FROM: KELAGAL{ETH, NEAR BASAVESHWAR DEVASTAN, HOME NO. 169, WARD NO, 4 MAIN ROAD GAJEDRAGAD, GADAG KARNATAKA - 582114 PRINTED AT: MAILARALINGESHWAR PRINTERS, WARD NO, 3, SUDI TQ, GAJENDRAGAD, GADAG, KARNATAKA- 582114